ವಿಜಯಪುರ | ಸಂಪುಟ 02 | ಸಂಚಿಕೆ 194 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ


ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com  RNI NO: KARKAN/2023/86203  ಗುರುವಾರ, ಸೆಪ್ಟೆಂಬರ್ 26, 2024

"ಹೈಕೋರ್ಟ್ ತೀರ್ಪಿಗೂ ಮುನ್ನ ನಾನು ತಪ್ಪೇ ಮಾಡಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದರು. ಆದರೆ ಈಗ ಕೋರ್ಟ್ ಮೇಲ್ನೋಟಕ್ಕೆ ತಪ್ಪು ನಡೆದಿದೆ ಎಂದು ಹೇಳಿದ್ದರಿಂದ ಸಿದ್ದರಾಮಯ್ಯ ಅವರು ತಮ್ಮ ಮೇಲಿನ ನಂಬಿಕೆ ಉಳಿಬೇಕು ಅಂದ್ರೆ ರಾಜಿನಾಮೆ ನೀಡುವುದು ಉತ್ತಮ."



■ ಸಂತೋಷ್ ಹೆಗ್ಡೆ
ನಿವೃತ್ತ ಲೋಕಾಯುಕ್ತ ನ್ಯಾಯಮೂರ್ತಿ

## ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ

# ಗಿರಿಜನ ಉಪ ಯೋಜನೆ ಅನುದಾನ ಸಮರ್ಪಕ ಬಳಕೆಯಾಗಲಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ವಿಶೇಷ ಘಟಕ ಯೋಜನೆಯ ಹಾಗೂ ಗಿರಿಜನ ಉಪಯೋಜನೆಯ ಅನುದಾನವನ್ನು ಲ್ಯಾಪ್ಸ್ ಆಗದಂತೆ ಸಮರ್ಪಕ ಬಳಕೆಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚಿಸಿದರು.

ಮಂಗಳವಾರ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ 2024-25ನೇ ಸಾಲಿನ ವಿಶೇಷ ಘಟಕ ಯೋಜನೆಯ ಹಾಗೂ ಗಿರಿಜನ ಉಪಯೋಜನೆಯ ಕೇಂದ್ರ, ರಾಜ್ಯ ಹಾಗೂ ಜಿಲ್ಲಾ ವಲಯ ಯೋಜನೆ ಕಾರ್ಯಕ್ರಮಗಳ ಇಲಾಖಾವಾರು ಆಗಸ್ಟ್-2024ರ ಮಾಹೆಯ ಅಂತ್ಯದವರೆಗೆ ಸಾಧಿಸಿದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೇ ವಿವಿಧ ಇಲಾಖೆಗಳಿಗೆ ಅನುದಾನ ಬಿಡುಗಡೆಯಾಗಿದ್ದು ಬಿಡುಗಡೆಯಾದ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಕಾಮಗಾರಿಗಳನ್ನು ಶೀಘ್ರವಾಗಿ ಮುಗಿಸುವಂತೆ ಸೂಚಿಸಿದರು. ಬಾಕಿ ಕಾಮಗಾರಿಗಳನ್ನು ತ್ವರಿತ ಗತಿಯಲ್ಲಿಪೂರ್ಣಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಪೌರ ಕಾರ್ಮಿಕರಿಗೆ ನೇಮಕಾತಿ ಸಂದರ್ಭದಲ್ಲಿ ಬೇಕಾದ ಪ್ರಮಾಣ ಪತ್ರ ನೀಡಿಕೆ ವಿಳಂಬ ಆಗುತ್ತಿದ್ದು, ಆದಷ್ಟು ಶೀಘ್ರವಾಗಿ ಪರಿಶೀಲನೆ ಮಾಡಿ ಪೌರ ಕಾರ್ಮಿಕರಿಗೆ ಅನುಕೂಲ ಮಾಡಿಕೊಡಬೇಕು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಹೊರಗುತ್ತಿಗೆ ಆಧಾರದಲ್ಲಿರುವ ಪೌರ ಕಾರ್ಮಿಕರಿಗೆ ಸಮರ್ಪಕವಾಗಿ ಇ.ಪಿ.ಎಫ್ ಇ.ಎಸ್.ಐ ಕಟಾವು ಕುರಿತು ನಿಯತಮಿತವಾಗಿ ಪರಿಶೀಲಿಸಬೇಕು, ಪ್ರತಿ ಮೂರು ತಿಂಗಳಿಗೊಮ್ಮೆ ಪೌರ ಕಾರ್ಮಿಕರ ಆರೋಗ್ಯ ತಪಾಸಣೆಯನ್ನು ತಜ್ಞ ವೈದ್ಯರಿಂದ ನಡೆಸಬೇಕು ಹಾಗೂ ಎಲ್ಲ ಪೌರ ಕಾರ್ಮಿಕರಿಗೆ ಸುರಕ್ಷತಾ ಪರಿಕರಗಳನ್ನು ಸಮರ್ಪಕವಾಗಿ ಒದಗಿಸಬೇಕು ಬಳಸುವಂತೆ ನೋಡಿಕೊಳ್ಳಬೇಕು. ಪೌರ ಕಾರ್ಮಿಕರಿಗೆ ವಿಶ್ರಾಂತಿ ಗ್ರಹಗಳನ್ನು ಸ್ಥಾಪಿಸಿ ಅಲ್ಲಿ ಅವರಿಗೆ ಎಲ್ಲ ಮೂಲಭೂತ ಸೌಲಭ್ಯ ಒದಗಿಸುವಂತೆ ಸೂಚಿಸಿದರು.

ಹೊರಗುತ್ತಿಗೆ ಆಧಾರ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವವರಿಗೆ ಆರೋಗ್ಯ ವಿಮಾ ಯೋಜನೆ ಸೌಲಭ್ಯ ಒದಗಿಸಿಕೊಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿಗಳಾದ ನಿಂಗಪ್ಪ ಗೋಠೆ, ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ರಾಮಣ್ಣ ಅಥಣಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪುಂಡಲಿಕ ಮಾನವರ, ನಗರಾಭಿವೃದ್ಧಿ ಕೋಸದ ಯೋಜನಾ ನಿರ್ದೇಶಕರಾದ ಬದ್ರುದ್ದೀನ ಸೌದಾಗರ, ಪುರಸಭೆಯ ಮುಖ್ಯಾಧಿಕಾರಿಗಳು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಬಿಜೆಪಿ ಆಗ್ರಹ



ಬೆಂಗಳೂರು: ಮುಡಾ ಹಗರಣ ಪ್ರಕರಣದ ರಿಟ್ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೈತಿಕ ಹೊಣೆ ಹೊತ್ತು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಬಿಜೆಪಿ ಆಗ್ರಹಿಸಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಮಾತನಾಡಿ, ಹೈಕೋರ್ಟ್ ತೀರ್ಪು ಪಕ್ಷದ ಹೋರಾಟಕ್ಕೆ ಸಂದ ಜಯ. ಕಾನೂನಿನ ಮುಂದೆ ಎಲ್ಲರೂ ಸಮಾನರು ಎಂಬುದು ಹೈಕೋರ್ಟ್‌ನ ತೀರ್ಪು ಸಾಬೀತಾಗಿದೆ ಎಂದು ಹೇಳಿದ್ದಾರೆ.

ಹಗರಣ ವಿಚಾರವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯಲು ಬಿಜೆಪಿ ತೀರ್ಮಾನಿಸಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನ್ಯಾಯಾಲಯದ ಆದೇಶವನ್ನು ಗೌರವಿಸಿ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಸುದೀರ್ಘ ಚರ್ಚೆಯ ನಂತರ ಈ ಆದೇಶ ಬಂದಿದೆ. ಹಲವು ಕಾಂಗ್ರೆಸ್ ನಾಯಕರು ರಾಜ್ಯಪಾಲರನ್ನು ಕೇಂದ್ರ ಸರ್ಕಾರದ ಏಜೆಂಟ್ ಎಂದು ಕರೆದಿದ್ದರು. ಕೋರ್ಟ್ ಆದೇಶ ನೀಡಿದ್ದು, ರಾಜ್ಯಪಾಲರ ಕ್ರಮಗಳನ್ನು ಹೈಕೋರ್ಟ್ ಮಾನ್ಯ ಮಾಡಿದೆ, ತನಿಖೆಗೆ ಆದೇಶಿಸಿರುವ ಅವರ ನಿರ್ಧಾರ ಕಾನೂನುಬದ್ಧತೆ ಮತ್ತು ಸಾಂವಿಧಾನಿಕ ತತ್ವಗಳನ್ನು ಆಧರಿಸಿದೆ ಎಂದು ಹೇಳಿದೆ. ಇದೀಗ ರಾಜ್ಯಪಾಲರ ವಿರುದ್ಧ ಕಿಡಿಕಾರಿದ್ದ ನಾಯಕರು ಕ್ಷಮೆ ಕೇಳಬೇಕು' ಎಂದು ಒತ್ತಾಯಿಸಿದರು.

ಸಿದ್ದರಾಮಯ್ಯ ಅವರು ಯಾವುದೇ ಕಪ್ಪು ಚುಕ್ಕೆ ಇಲ್ಲದಂತೆ ಆಡಳಿತ ನಡೆಸುವುದಾಗಿ ಹೇಳಿಕೊಂಡಿದ್ದರು. ಈಗ ನ್ಯಾಯಾಲಯವು ತೀರ್ಪು ಪ್ರಕಟಿಸಿದ್ದು, ನೈತಿಕ ಆಧಾರದ ಮೇಲೆ ನಾವು ಅವರ ರಾಜೀನಾಮೆಗೆ ಒತ್ತಾಯಿಸುತ್ತೇವೆ ಎಂದರು.

### ಮುಡಾ ಹಗರಣ । ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಲು ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಆಗ್ರಹ

"ಹಿಂದಿನ ಕಾಂಗ್ರೆಸ್ ಸರಕಾರದ ಅವಧಿಯಲ್ಲಿ 2013ರಿಂದ 2018ರ ಅವಧಿಯಲ್ಲಿ ಕೆ.ಜೆ.ಜಾರ್ಜ್ ಮತ್ತು ಸಂತೋಷ್ ಲಾಡ್ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಇದೀಗ ಬಿ ನಾಗೇಂದ್ರ ಅವರು ರಾಜೀನಾಮೆ ನೀಡಿದ್ದಾರೆ. ಇನ್ನಾದರೂ ಅನಗತ್ಯವಾಗಿ ರಾಜ್ಯಪಾಲರನ್ನು ನಿಂದಿಸುವುದು ಬಿಟ್ಟು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೈತಿಕ ಹೊಣೆ ಹೊತ್ತು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಸಿದ್ದರಾಮಯ್ಯ ಅವರು ರಾಮಕೃಷ್ಣ ಹೆಗಡೆ ಅವರ ಶಿಷ್ಯ ಎಂದು ಹೇಳಿಕೊಳ್ಳುತ್ತಾರೆ. ಈಗ ಹೈಕೋರ್ಟ್ ತೀರ್ಪು ನೀಡಿದೆ. ರಾಜೀನಾಮೆ ನೀಡಿದ ಬಳಿಕವೇ ಅವರು ಮುಂದಿನ ಹಂತದಲ್ಲಿ ಪ್ರಶ್ನೆ ಮಾಡಲಿ."



■ ಆರ್.ಅಶೋಕ
ವಿಧಾನಸಭೆ ವಿರೋಧ ಪಕ್ಷದ ನಾಯಕರು

## ನಿಡಗುಂದಿ: ಹೆಚ್ಚುವರಿ ಬಸ್ಸುಗಳಿಗೆ ಆಗ್ರಹಿಸಿ ಮನವಿ

■ ಉದಯರಶ್ಮಿ ದಿನಪತ್ರಿಕೆ

ನಿಡಗುಂದಿ: ವಿಜಯಪುರದಲ್ಲಿ ಸೆ.29 ಭಾನುವಾರದಂದು ಜರುಗುವ ಗ್ರಾಮ ಆಡಳಿತ ಅಧಿಕಾರಿ, ಕಡ್ಡಾಯ ಕನ್ನಡ ಪರೀಕ್ಷೆಗೆ ಹಾಜರಾಗುವ ನಿಡಗುಂದಿ ತಾಲೂಕಿನ ಪರೀಕ್ಷಾರ್ಥಿಗಳಿಗೆ ವಿಜಯಪುರಕ್ಕೆ ಹೋಗಲು ತೊಂದರೆಯಾಗದಂತೆ ಪಟ್ಟಣದ ಬಸ್ ನಿಲ್ದಾಣದಿಂದ ಹೆಚ್ಚುವರಿ ಬಸ್ಸುಗಳನ್ನು ಒದಗಿಸಬೇಕೆಂದು ಆಗ್ರಹಿಸಿ ನವ ನಿಡಗುಂದಿ ಜನಾಭಿಪ್ರಾಯ ವೇದಿಕೆಯಿಂದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ನಿಡಗುಂದಿ ನಿಯಂತ್ರಕ ಎಚ್.ಕೆ.ಕಟ್ಟಿಮನಿ ಅವರಿಗೆ ಬುದವಾರ ಮನವಿ ಸಲ್ಲಿಸಲಾಯಿತು.

ಈ ಸಮಯದಲ್ಲಿ ಎಸ್ ಎಸ್ ಕೋತಿನ, ವಿಜಯ್ ಕಟ್ಟಿಮತ, ಬಸಲಿಂಗಪ್ಪ ಕುಂಬಾರ, ವಿಜಯ್ ಕುಮಾರ ಚಿನಿವಾಲರ, ಸಂತೋಷ್ ಕಡಿ, ಆನಂದ್ ಬೋವಿವಡ್ಡರ, ಸಿದ್ದು ಚಲವಾದಿ, ಹನುಮಂತ್ ಭಜಂತ್ರಿ, ಗಂಗಾರಾಮ್ ಬಂಡಿವಡ್ಡರ, ಮುತ್ತುರಾಜ್ ಚಲವಾದಿ, ಶಾಂತಪ್ಪ ಹಡಪದ ಸೇರಿದಂತೆ ಅನೇಕರಿದ್ದರು.



# ಬೆಳೆಹಾನಿ ಕುರಿತು ಸಚಿವ ಎಂ.ಬಿ.ಪಾಟೀಲ ಪರಿಶೀಲನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಬಿ.ಪಾಟೀಲ ಅವರು ತಿಕೋಟಾ ತಾಲೂಕಿನ ತೊರವಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಅತ್ತಾಲಟ್ಟಿ, ಕೊಟ್ಯಾಳ ಹಾಗೂ ಬಬಲೇಶ್ವರ ತಾಲೂಕಿನ ದಾಶ್ಯಾಳ, ಸಾರವಾಡ, ಹೊನಗನಹಳ್ಳಿ ಮತ್ತು ತೊನಶ್ಯಾಳ ಗ್ರಾಮಗಳಿಗೆ ಭೇಟಿ ನೀಡಿ ಮಳೆಯಿಂದ ಆಗಿರುವ ಹಾನಿ ಕುರಿತು ಪರಿಶೀಲನೆ ನಡೆಸಿದರು.

ಮಳೆಯಿಂದ ಹಾನಿಯಾಗಿರುವ ಬೆಳೆ ಸರಿಯಾಗಿ ನಿಯಮಾನುಸಾರ ಸಮೀಕ್ಷೆ ಕೈಗೊಳ್ಳಲು ತಿಳಿಸಿದರು. ಸಮೀಕ್ಷಾ ಕಾರ್ಯಕ್ಕೆ ನೂತನ ತಂತ್ರಜ್ಞಾನಗಳನ್ನು ಬಳಸಿಕೊಂಡು ಬೆಳೆಗಳ ಜೊತೆಗೆ ಹಾನಿಗೊಳಗಾದ ಮನೆಗಳ ಕುರಿತು ಹಾಗೂ ಇತರೆ ಅಂಶಗಳ ಕುರಿತು ಸಹ ಸಮೀಕ್ಷೆ ನಡೆಸಲು ಸೂಚನೆ ನೀಡಿದರು.

ಸುರಕ್ಷಾ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಕಟ್ಟು ನಿಟ್ಟಿನ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಟಿ.ಭೂಬಾಲನ್, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ, ಪೋಲಿಸ್ ವರಿಷ್ಠಾಧಿಕಾರಿ ಋಷಿಕೇಶ ಸೋನಾವಣೆ , ತಿಕೋಟಾ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಐನಾಪುರ, ಬಬಲೇಶ್ವರ ಕಾರ್ಯನಿರ್ವಾಹಕ ಅಧಿಕಾರಿ ವ್ಹಿ.ಎಸ್.ಹಿರೇಮಠ ಸೇರಿದಂತೆ ಕೃಷಿ, ತೋಟಗಾರಿಕೆ ಸೇರಿ ವಿವಿಧ ಇಲಾಖೆಯ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.

# ರಾಜಕಾಲುವೆ ಅತಿಕ್ರಮಣ ತೆರವಿಗೆ ಸಚಿವ ಎಂ.ಬಿ.ಪಾಟೀಲ ಸೂಚನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಮಳೆನೀರು ನಿಲ್ಲದೇ ಸರಾಗವಾಗಿ ಹರಿದುಹೋಗುವಂತೆ ಕಸ, ತಾಜ್ಯಗಳನ್ನು ತೆಗೆದು ರಾಜಕಾಲುವೆಗಳನ್ನು ಸ್ವಚ್ಚವಾಗಿಡಬೇಕು. ಒತ್ತುವರಿಯಾಗಿರುವ ರಾಜಕಾಲುವೆ, ಅತಿಕ್ರಮಣವನ್ನು 15 ದಿನಗಳ ಕಾಲಮಿತಿಯಲ್ಲಿ ತೆರವುಗೊಳಿಸಲು ಕ್ರಮವಹಿಸಿ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಆದ ಜಿಲ್ಲಾ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಸೂಚಿಸಿದರು.

ಬುಧವಾರ ಜಿಲ್ಲಾ ಪಂಚಾಯತಿಯ ಸಭಾಂಗಣದಲ್ಲಿ ಪ್ರಕೃತಿ ವಿಕೋಪ ನಿರ್ವಹಣೆಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಳೆಹಾನಿ ತಡೆಗಟ್ಟಲು ಮುನ್ನೆಚ್ಚರಿಕೆ ಕ್ರಮವಾಗಿ ಗ್ರಾಮ ಪಂಚಾಯತ್, ತಾಲೂಕು ಪಂಚಾಯತ್, ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಹಾಗೂ ಪಾಲಿಕೆ ವ್ಯಾಪ್ತಿಯಲ್ಲಿ ಆಯುಕ್ತರನ್ನೊಳಗೊಂಡ ಕಾರ್ಯಪಡೆ ರಚಿಸಿಕೊಂಡು ಆಗಾಗ ಸಭೆ ನಡೆಸಬೇಕು ಎಂದು ಹೇಳಿದರು.

ಲೋಕೋಪಯೋಗಿ ಇಲಾಖೆಯು ರಸ್ತೆ ನಿರ್ಮಾಣ ಸಂದರ್ಭದಲ್ಲಿ ಚರಂಡಿ ವ್ಯವಸ್ಥೆ ಕಾಮಗಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು.

ಮಳೆಯಿಂದ ಹಾನಿಯಾದ ರಸ್ತೆ, ವಿದ್ಯುತ್ ಕಂಬ ಮಾಹಿತಿ ಸಂಗ್ರಹಿಸುವಂತೆಯೂ, ಮಳೆ ಸಂದರ್ಭದಲ್ಲಿ ಯಾವುದೇ ಅಪಾಯಗಳು ಉಂಟಾಗದಂತೆ ವಿದ್ಯುತ್ ಕಡಿತಗೊಳಿಸಬೇಕು ಎಂದು ಹೇಳಿದರು.

ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಸರಿಯಾಗಿ ಕರ್ತವ್ಯ ನಿರ್ವಹಿಸುವ ಬಗ್ಗೆ, ಸಕಾಲಕ್ಕೆ ಹಾಜರಾಗುವ ಬಗ್ಗೆ ಜಿಲ್ಲಾ ಪಂಚಾಯತಿಯ ಕಾರ್ಯನಿರ್ವಾಹಕಾಧಿಕಾರಿಗಳು ಹಾಗೂ ಜಿಲ್ಲಾ ಆರೋಗ್ಯಾಧಿಕಾರಿಗಳು ಕಾಲಕಾಲಕ್ಕೆ ಅನಿರೀಕ್ಷಿತವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಮಳೆಯಿಂದ ನಗರ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಪೂರೈಕೆಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಹೇಳಿದ ಅವರು, ಎರಡು ವಾರಗಳಲ್ಲಿ ಮತ್ತೊಮ್ಮೆ ಸಭೆ ನಡೆಸಲಾಗುವುದು. ಯಾವುದೇ ನೆಪ ಹೇಳದೆ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದರು.

ಡೋಣಿ ನದಿ: ಜಿಲ್ಲೆಯಲ್ಲಿ ವ್ಯಾಪಕವಾಗಿ ಮಳೆ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಡೋಣಿ ನದಿಯಿಂದ ಉಂಟಾಗುವ ಪ್ರವಾಹವನ್ನು ತಡೆಗಟ್ಟಲು ನದಿಯ ಇಕ್ಕೆಲಗಳಲ್ಲಿ ಬೆಳೆದಿರುವ ಜಾಲಿಕಂಟಿಗಳನ್ನು ಸ್ವಚ್ಛಗೊಳಿಸುವ ಕಾಮಗಾರಿ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಈಸಂದರ್ಭದಲ್ಲಿಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ್ವರ ಬಬಲೇಶ್ವರ ಮೇಯರ್ ಮಹೇಜನಬಿ ಹೊರ್ತಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕನಾನ್ ಮುಶ್ರೀಪ್, ಉಪ ಮೇಯರ್ ದಿನೇಶ ಹಳ್ಳಿ, ಜಿಲ್ಲಾಧಿಕಾರಿ ಟಿ. ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ ಸೋನಾವಣೆ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಮನೆ-ಬೆಳೆಹಾನಿ ಸಮೀಕ್ಷೆಗೆ ಸೂಚನೆ

ಜಿಲ್ಲೆಯಲ್ಲಿ ದಾಖಲೆಯ ಮಳೆಯಿಂದಾಗಿರುವ ಹಾನಿಯ ಕುರಿತು ತುರ್ತಾಗಿ ಸಮೀಕ್ಷೆ ಕೈಗೊಂಡು ಮನೆ-ಬೆಳೆಹಾನಿ ಸಮೀಕ್ಷೆ ಕೈಗೊಳ್ಳಬೇಕು. ನಿಖರ ಮಾಹಿತಿ ಸಿದ್ಧಪಡಿಸುವಂತೆಯೂ ಹಾಗೂ ಪಾಲಿಕೆ ವ್ಯಾಪ್ತಿಯಲ್ಲಿರುವ ಹಾನಿಯ ಬಗ್ಗೆ ಸಮೀಕ್ಷೆ ಕೈಗೊಂಡು ವರದಿ ಸಲ್ಲಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸಚಿವ ಎಂ.ಬಿ.ಪಾಟೀಲ ಸೂಚನೆ ನೀಡಿದರು.

# ಎಲ್ಲ 136 ಶಾಸಕರೂ ಸಿಎಂ ಜೊತೆಗಿರುತ್ತೇವೆ: ಶಾಸಕ ಯಶವಂತರಾಯಗೌಡ



■ ಉದಯರಶ್ಮಿ ದಿನಪತ್ರಿಕೆ

ಇಂಡಿ: ರಾಜ್ಯದ ಉಚ್ಚನ್ಯಾಯಾಲಯ ಮುಖ್ಯಮಂತ್ರಿಗಳ ವಿರುಧ್ಧ ಪ್ರಾಥಮಿಕ ತನಿಖೆಗೆ ಆದೇಶಿಸಿದ್ದು, ನ್ಯಾಯಾಲಯಕ್ಕೆ ನಾವು ಗೌರವಿಸುತ್ತೇವೆ. ಈ ಕುರಿತು ಕಾನೂನು ಹೋರಾಟದ ಜೊತೆಗೆ ರಾಜಕೀಯ ಹೋರಾಟಕ್ಕೆ ಎಲ್ಲ 136 ಜನ ಶಾಸಕರು ಸಿದ್ದರಾಮಯ್ಯನವರೊಂದಿಗೆ ಇರುತ್ತೇವೆ ಎಂದು ಇಂಡಿ ಶಾಸಕ ಯಶವಂತರಾಯ ಗೌಡ ಪಾಟೀಲ್ ಹೇಳಿದರು

ಮಂಗಳವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಸರಕಾರ ಅಭದ್ರಗೊಳಿಸುವ ಷಡ್ಯಂತರ ನಡೆಸುತ್ತಿರುವ ಬಿಜೆಪಿ ನಾಯಕರ ಕಸರತ್ತು ಕರ್ನಾಟಕದಲ್ಲಿ ನಡೆಯುವುದಿಲ್ಲ, ಮುಖ್ಯಮಂತ್ರಿಗಳ ವಿರುದ್ಧ ಬಿಜೆಪಿ ಅವರು ದೊಂಬರಾಟ ನಡೆಸುತ್ತಿದ್ದಾರೆ, ಆದರೆ ಅದು ಫಲಿಸುವುದಿಲ್ಲ. ವಿರೋಧ ಪಕ್ಷದ ಷಡ್ಯಂತ್ರಕ್ಕೆ ದೆಹಲಿ, ಜಾರ್ಖಂಡ್ ರಾಜ್ಯಗಳಲ್ಲಿಯೂ ಸಹ ಮುಖ್ಯಮಂತ್ರಿಗಳಿಗೆ ಕೇಂದ್ರ ಸರ್ಕಾರ ಹಾಗೂ ಅಲ್ಲಿನ ಸ್ಥಳೀಯ ಬಿಜೆಪಿ ನಾಯಕರುಗಳು ಷಡ್ಯಂತ್ರ ರೂಪಿಸಿ ಸರಕಾರ ಅಭದ್ರಗೊಳಿಸುವ ಕಾರ್ಯ ಮಾಡಿವೆ. ಆದರೆ ಕರ್ನಾಟಕದಲ್ಲಿ ಅದು ಸಾಧ್ಯವಾಗುವುದಿಲ್ಲ.

ಬಿಜೆಪಿ ಸರಕಾರ ಈಡಿ, ಸಿಬಿಐ, ಐಟಿ ಇಲಾಖೆಗಳನ್ನು ತಮಗೆ ಬೇಕಾದಂತೆ ಬಳಸಿಕೊಳ್ಳುವ ಮೂಲಕ ಪ್ರಜಾಪ್ರಭುತ್ವದ ವಿರುಧ್ಧ ಕಾರ್ಯ ಮಾಡುತ್ತಿದ್ದಾರೆ.

ಈ ರಾಜ್ಯದ ಪ್ರಜ್ಞಾವಂತ ಜನ 2024ರಲ್ಲಿ 136 ಶಾಸಕರನ್ನು ಕಾಂಗ್ರೆಸ್ ಪಕ್ಷಕ್ಕೆ ಆಯ್ಕೆ ಮಾಡಿದ್ದು, ಇನ್ನೂ ಮುಂಬರುವ ಮೂರುವರೆ ವರ್ಷಗಳ ಕಾಲ ಕಾಂಗ್ರೆಸ್ ಸರ್ಕಾರವೇ ಅಧಿಕಾರ ನಡೆಸಲಿದೆ. ಶಾಸಕಾಂಗ ಪಕ್ಷದ ಎಲ್ಲಾ ಶಾಸಕರು, ಸಚಿವರುಗಳು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪರವಾಗಿದ್ದಾರೆ.

ನಾವು ಕಾನೂನು ಹೋರಾಟದ ಜೊತೆಗೆ ರಾಜಕೀಯ ಹೋರಾಟಕ್ಕೂ ಸಿದ್ಧರಿದ್ದು, ಯಾವುದೇ ಕಾರಣಕ್ಕೂ ನಮ್ಮ ಕಾಂಗ್ರೆಸ್ ಸರ್ಕಾರ ಅಭ್ರಗೊಳಿಸಲು ಬಿಡುವುದಿಲ್ಲ, 14 ಬಜೆಟ್ ಮಂಡಿಸಿದ ಕ್ರಿಯಾಶೀಲ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಕೆಳಗಿಳಿಸುವ ಹುನ್ನಾರ ಎಂದಿಗೂ ಸಹ ಸಫಲವಾಗುವುದಿಲ್ಲ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಪುರಸಭೆ ಅಧ್ಯಕ್ಷ ಲಿಂಬಾಜಿ ರಾಠೋಡ, ಜಾವೀದ ಮೋಮಿನ, ಜಟ್ಟೆಪ್ಪ ರವಳಿ, ಪ್ರಶಾಂತ ಕಾಳೆ, ಭೀಮಣಾ ಕವಲಗಿ ಇದ್ದರು.

### ಸಿಎಂ ರಾಜೀನಾಮೆಗೆ ಆಗ್ರಹಿಸಿ ವಿಜಯಪುರದಲ್ಲಿ ಬಿಜೆಪಿಯಿಂದ ಬೃಹತ್ ಪ್ರತಿಭಟನೆ

# ನೈತಿಕ ಹೊಣೆ ಹೊತ್ತು ಸಿಎಂ ರಾಜೀನಾಮೆ ನೀಡಲಿ: ಬೆಳ್ಳುಬ್ಬಿ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಮುಡಾ ಹಗರಣದಲ್ಲಿ ರಾಜ್ಯ ಹೈಕೋರ್ಟ್ ತೀರ್ಪನ್ನು ಗೌರವಿಸಿ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಒತ್ತಾಯಿಸಿ ಜಿಲ್ಲಾ ಬಿಜೆಪಿ ಘಟಕದಿಂದ ಬುಧವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ಈ ವೇಳೆ ಮಾಜಿ ಸಚಿವ ಎಸ್. ಕೆ.ಬೆಳ್ಳುಬ್ಬಿ ಮಾತನಾಡಿ, ಮುಡಾನಲ್ಲಿ ಅಕ್ರಮವಾಗಿ 14 ಸೈಟ ಪಡೆದಿರುವುದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅಧಿವೇಶನದಲ್ಲಿ ಬಿಜೆಪಿಯಿಂದ ನಿಲುವಳಿ ಸೂಚನೆಗೆ ಉತ್ತರ ಕೊಡದೆ ಪಲಾಯನ ಮಾಡಿದರು. ರಾಮಕೃಷ್ಣ ಹೆಗಡೆ, ದೇವೇಗೌಡ, ಪಟೇಲ್ ಅವರಂತಹ ಮೌಲ್ಯಯುತ ರಾಜಕಾರಣಿಗಳ ಸಂಸ್ಕಾರದಲ್ಲಿ ಬೆಳೆದ ಸಿದ್ಧರಾಮಯ್ಯ ನಿಮಗೆ ಇಂತಹ ಘಟನೆ ಶೋಭೆ ತರುವದಿಲ್ಲ. ನೈತಿಕ ಹೊಣೆ ಹೊತ್ತಿ ತಕ್ಷಣವೇ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದರು.

ರಾಜ್ಯಪಾಲರ ವಿರುದ್ಧ ಮಾತನಾಡಿ ದಬ್ಬಾಳಿಕೆ ಮಾಡಿದ್ದೀರಿ, ಆದರೆ ಹೈಕೋರ್ಟ್ ರಾಜ್ಯಪಾಲರ ನಿರ್ಣಯವನ್ನು ಎತ್ತಿ ಹಿಡಿದಿದೆ. 30 ಗಂಟೆಗಳ ಕಾಲ ವಾದ-ವಿವಾದ ನಡೆದು ತಾವು ಪಡೆದ ಸೈಟುಗಳು ಅಕ್ರಮ ಎಂದು ತನಿಖೆ ಆದೇಶಿಸಿದೆ ಆದ್ದರಿಂದ ಕೂಡಲೇ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಒತ್ತಾಯಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಆರ್. ಎಸ್.ಪಾಟೀಲ ಕೂಚಬಾಳ ಮಾತನಾಡಿ, ಸಿಎಂ ಸೇರಿದಂತೆ ಕಾಂಗ್ರೆಸ್ ನಾಯಕರು ಸಂವಿಧಾನದ ಪುಸ್ತಕ ಕೈಯಲ್ಲಿ ಹಿಡಿದು ಹೋಗುತ್ತಿದ್ದರು ಇದೇ ಏನು ನೀವು ಸಂವಿಧಾನಕ್ಕೆ ಕಾನೂನಿಗೆ ಬೆಲೆ ಕೊಡುವ ರೀತಿ ಎಂದು ಪ್ರಶ್ನಿಸಿದರಲ್ಲದೆ, 40 ವರ್ಷಗಳ ನಿಮ್ಮ ಸುದೀರ್ಘ ರಾಜಕಿಯದಲ್ಲಿ ಹೆಗಡೆ ಪಟೇಲ್ ಅವರಂತಹ ಗರಡಿಯಲ್ಲಿ ಪಳಗಿ ರಾಜೀನಾಮೆ ನೀಡದಿರುವದು ಸಂವಿಧಾನ ವಿರೋಧಿ ಧೋರಣೆಯಾಗಿದೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ವಿಜುಗೌಡ ಪಾಟೀಲ್, ಕಾಸುಗೌಡ ಬಿರಾದಾರ್, ಪ್ರಧಾನ ಕಾರ್ಯದರ್ಶಿಗಳಾದ ಮುಳುಗುಡ ಪಾಟೀಲ್, ಈರಣ್ಣ ರಾವೂರ್, ಸಾಬು ಮಾಶಾಳ, ಸಂಜಯ ಐಹೊಳೆ, ಉಮೇಶ ಕೋಳ್ಕೂರ್, ಗೋಪಾಲ್ ಘಟಕಾಂಬಳೆ, ಶಂಕರ್ ಹೂಗಾರ, ಮಹಾನಗರ ಪಾಲಿಕೆ ಸದಸ್ಯರಾದ ರಾಹುಲ್ ಜಾದವ್, ಕರಡಿ, ಜವಹಾರ ಗೋಸಾವಿ, ರವಿಕಾಂತ ಬಗಲಿ, ಗುರುಲಿಂಗಪ್ಪ ಅಂಗಡಿ, ಮಹೇಂದ್ರ ನಾಯಕ್, ಸುರೇಶ್ ಬಿರಾದಾರ, ಈರಣ್ಣ ಪಟ್ಟಣಶೆಟ್ಟಿ, ಭೀಮಾಶಂಕರ್ ಹದನೂರು, ಶೀಲವಂತ ಉಮರಾಣಿ, ಬಸವರಾಜ ಹೂಗಾರ, ಚಿದಾನಂದ ಚಲವಾದಿ, ಸಪ್ನಾ ಕಣ್ಮುಚ್ಚಿನಾಳ ಮಲ್ಲಮ್ಮ ಜೋಗುರ, ಲಕ್ಷ್ಮಿ ಕನ್ನೊಳ್ಳಿ, ಗೀತಾ ಕುಕನೂರು, ಕಾಂತು ಸಿಂಧೆ, ವಿಜಯ ಜೋಶಿ ಸೇರಿದಂತೆ ಎಲ್ಲಾ ಮಂಡಲದ ಅಧ್ಯಕ್ಷರು ಮಹಾನಗರ ಪಾಲಿಕೆ ಸದಸ್ಯರು, ಮಹಿಳಾ ಮೋರ್ಚಾ ಪದಾಧಿಕಾರಿ, ಯುವ ಮೋರ್ಚಾ ಪದಾಧಿಕಾರಿಗಳು ಸೇರಿದಂತೆ ಬಿಜೆಪಿ ಕಾರ್ಯಕರ್ತರು ಪಾಲ್ಗೊಂಡಿದ್ದರು.

### ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಜಿಲ್ಲಾಧಿಕಾರಿಗಳಿಗೆ ಸೂಚನೆ

## ಧಾರಾಕಾರ ಮಳೆ: ಕೂಡಲೇ ಸಮೀಕ್ಷೆ ನಡೆಸಿ ವರದಿ ಸಲ್ಲಿಸಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲಾದ್ಯಂತ ಸೋಮವಾರ ರಾತ್ರಿಯಿಡೀ ಸುರಿದ ಧಾರಾಕಾರ ಮಳೆಯ ಹಿನ್ನೆಲೆಯಲ್ಲಿ ಕೂಡಲೇ ಸಮೀಕ್ಷೆ ನಡೆಸಿ ವರದಿ ಸಲ್ಲಿಸುವಂತೆ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಅವರು, "ಇಂದು ಮಂಗಳವಾರ ಬೆಳಿಗ್ಗೆ ಜಿಲ್ಲಾಧಿಕಾರಿ ಟಿ. ಭೂಬಾಲನ್ ಅವರಿಗೆ ದೂರವಾಣಿ ಕರೆ ಮಾಡಿ ಮಾತನಾಡಿದ್ದೇನೆ. ಎಲ್ಲ ತಾಲೂಕುಗಳ ತಹಸೀಲ್ದಾರರಿಂದ ಮಳೆಯ ಪ್ರಮಾಣ ಮತ್ತು ಅದರಿಂದ ಉಂಟಾಗಿರುವ ಆಸ್ತಿ– ಪಾಸ್ತಿ ಹಾನಿಯ ಕುರಿತು ಕೂಡಲೇ ಪ್ರಾಥಮಿಕ ಮಾಹಿತಿ ಸಂಗ್ರಹಿಸಿ ವರದಿ ನೀಡುವಂತೆ ಸೂಚಿಸಿದ್ದೇನೆ" ಎಂದು ತಿಳಿಸಿದ್ದಾರೆ.

ವಿಜಯಪುರ ನಗರ ಮತ್ತು ಜಿಲ್ಲಾದ್ಯಂತ ಮಳೆಯಿಂದ ಸಮಸ್ಯೆ ಎದುರಾಗಿರುವ ಸ್ಥಳಗಳಿಗೆ ಖುದ್ದಾಗಿ ತೆರಳಿ ಪರಿಶೀಲನೆ ನಡೆಸಬೇಕು. ಮಳೆ ನೀರಿನಿಂದ ಸಂತ್ರಸ್ತರಾದ ಜನರ ನೆರವಿಗೆ ಧಾವಿಸುವಂತೆ ಹೇಳಿದ್ದೇನೆ.

ಬೆಳೆಹಾನಿ, ಆಸ್ತಿಪಾಸ್ತಿ ನಷ್ಟದ ಕುರಿತು ಕಂದಾಯ, ಕೃಷಿ, ತೋಟಗಾರಿಕೆ, ಆರೋಗ್ಯ, ಪೊಲೀಸ್ ಇಲಾಖೆಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸುವಂತೆ ಸೂಚಿಸಲಾಗಿದೆ. ಅಲ್ಲದೇ, ಅಗತ್ಯ ತುರ್ತು ಕ್ರಮ ಸೇರಿದಂತೆ ಸಕಲ ರೀತಿಯಿಂದ ಕ್ರಮ ಕೈಗೊಂಡು ಸ್ಪಂದಿಸುವಂತೆ ಸೂಚನೆ ನೀಡಿದ್ದೇನೆ ಎಂದು ಅವರು ತಿಳಿಸಿದ್ದಾರೆ.

ಕಳೆದ ರಾತ್ರಿ ಸುರಿದ ಭಾರಿ ಮಳೆಯಿಂದ ಸಂತ್ರಸ್ತರಾದವರು ಆತಂಕ ಪಡುವ ಅಗತ್ಯವಿಲ್ಲ. ಸರಕಾರ ಸದಾ ತಮ್ಮ ಹಿತಕಾಯಲು ಬದ್ಧವಾಗಿದೆ ಎಂದು ಸಚಿವರು ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿ.ಎಂ.ಪಾಟೀಲ ಮೆಡಿಕಲ್ ಕಾಲೇಜ್ ನಲ್ಲಿ ಕ್ರೀಡಾ ದಿನಾಚರಣೆ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬಿ.ಎಲ್.ಡಿ.ಇ. ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ.ಎಂ.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಗುರುವಾರ ಜೆನಿತ್– 2024 ವಾರ್ಷಿಕ ಕ್ರೀಡಾ ದಿನ ಆಚರಿಸಲಾಯಿತು.

ಶ್ರೀ ಬಿ.ಎಂ. ಪಾಟೀಲ್ ವೈದ್ಯಕೀಯ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನೆ ಕೇಂದ್ರದ ಗ್ರಂಥಾಲಯ ಕಟ್ಟಡದ ಸಭಾಂಗಣದಲಿ ಕ್ರೀಡಾ ವಿಭಾಗ ಆಯೋಜಿಸಿದ್ದ ಈ ಕಾರ್ಯಕ್ರಮವನ್ನು ಖ್ಯಾತ ಸೈಕ್ಲಿಸ್ಟ್ ವೆಂಕಪ್ಪ ಕೆಂಗಲಗುತ್ತಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ವಿವಿ ಕುಲಪತಿ ಡಾ. ಆರ್. ಎಸ್.ಮುಧೋಳ, ಕ್ರೀಡಾ ಸಮಿತಿಯ ಉಪಾಧ್ಯಕ್ಷ ಡಾ.ಗಿರೀಶ್ ಕುಳ್ಳೊಳ್ಳಿ, ವೈದ್ಯಕೀಯ ವಿಭಾಗದ ಡೀನ್ ಡಾ.ತೇಜಸ್ವಿನಿ ವಲ್ಲಭ, ಉಪಪ್ರಾಚಾರ್ಯ ಡಾ. ಎಂ.ಬಿ.ಪಾಟೀಲ, ಡಾ.ಸುಮಂಗಲಾ ಪಾಟೀಲ, ಬಿ.ಎಲ್.ಡಿ.ಇ. ಸಂಘದ ದೈಹಿಕ ಶಿಕ್ಷಣ ನಿರ್ದೇಶಕ ಎಸ್. ಎಸ್. ಕೋರಿ, ಕ್ರೀಡಾ ವಿಭಾಗದ ಸಹಾಯಕ ನಿರ್ದೇಶಕಿ ಡಾ. ಮಹಾದೇವಿ ವಾಲಿ,ವಿದ್ಯಾರ್ಥಿ ಪ್ರತಿನಿಧಿಗಳಾದ ಡಾ.ರುತುಜಾ ನಿಕಮ್, ಡಾ. ಎಸ್. ರಾಹುಲ, ಬೋಧಕ ಹಾಗೂ ಬೋಧಕರ ಹೊರತಾದ ಸಿಬ್ಬಂದಿ ಉಪಸ್ಥಿತರಿದ್ದರು.

ಈ ಕಾರ್ಯಕ್ರಮದಲ್ಲಿ ಸುಮಾರು 500 ವಿದ್ಯಾರ್ಥಿಗಳು ಸಕ್ರೀಯವಾಗಿ ಭಾಗವಹಿಸಿದ್ದರು.

## ಸಂಜುಕುಮಾರ ಫನಾತೆ ಆರೋಗ್ಯ ವಿಚಾರಿಸಿದ ಈಶ್ವರಸಿಂಗ್

ಬೀದರ: ಭಾರತೀಯ ಜನತಾ ಪಾರ್ಟಿಯ ಬೀದರ ಹಳೆನಗರ ಭಾಗದ ಮುಖಂಡ ಹಾಗೂ ಭಾವಸಾರ ಕ್ಷತ್ರಿಯ ಸಮಾಜದ ಅಧ್ಯಕ್ಷರಾದ ಸಂಜುಕುಮಾರ ಫನಾತೆ ಅವರನ್ನು ಬ್ರಿಮ್ಸ್ ಆಸ್ಪತ್ರೆಯಲ್ಲಿ ಭೇಟಿ ಮಾಡಿ ಅವರಿಗೆ ಸಹಕಾರ ನೀಡಲಾಯಿತು ಎಂದು ಬಿಜೆಪಿ ವಿಭಾಗೀಯ ಪ್ರಭಾರಿ ಹಾಗೂ ಬೀದರ ವಿಧಾನಸಭಾ ಕ್ಷೇತ್ರದ ನಾಯಕ ಈಶ್ವರಸಿಂಗ್ ಠಾಕೂರ್ ತಿಳಿಸಿದರು.

ಕಳೆದ 8–10 ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿರುವ ಸಂಜುಕುಮಾರ ಫನಾತೆ ಅವರು ನಗರದ ಬ್ರಿಮ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅವರ ಅನಾರೋಗ್ಯದ ಮಾಹಿತಿ ತಿಳಿದ ತಕ್ಷಣ ಸೋಮವಾರ ಆಸ್ಪತ್ರೆಗೆ ಭೇಟಿ ನೀಡಿ ಅವರಿಗೆ ಚಿಕಿತ್ಸೆ ನೀಡುತ್ತಿರುವ ಜಿಲ್ಲಾ ವೈದ್ಯರಾದ ಡಾ. ಮಂಜುನಾಥ ಅವರನ್ನು ದೂರವಾಣಿ ಮುಖಾಂತರ ಸಂಪರ್ಕಿಸಿ ಚಿಕಿತ್ಸೆಯನ್ನು ನೀಡಬೇಕೆಂದು ಕೋರಲಾಯಿತು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೂಲಿಕಾರ್ಮಿಕರ ಸಮಸ್ಯೆ ಬಗೆಹರಿಸುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ

ಬೀದರ: ಜಿಲ್ಲೆಯ ಹುಮನಾಬಾದ ಪಟ್ಟಣದ ಕೈಗಾರಿಕಾ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿದ್ದ 70% ರಿಂದ 80% ರ ವರೆಗೆ ಕಂಪನಿಗಳು ಬಂದಾಗಿವೆ. ಇದರಿಂದ ಸದರಿ ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸುಮಾರು 5000 ಕ್ಕಿಂತ ಹೆಚ್ಚು ಕಾರ್ಮಿಕರು ತಮ್ಮ ಉದ್ಯೋಗವನ್ನು ಕಳೆದುಕೊಂಡು, ಅವರ ಕುಟುಂಬ ಬೀದಿ ಪಾಲಾಗಿರುತ್ತದೆ. ಅಲ್ಲದೇ ಈ ಬಡ ಕೂಲಿಕಾರ್ಮಿಕ–ರಿಗೆ ಆರೋಗ್ಯ ಸೌಲಭ್ಯ ಕೂಡ ಇರುವುದಿಲ್ಲ. ಕೆಲಸ ಕಳೆದುಕೊಂಡ ಕೂಲಿಕಾರ್ಮಿಕರು ಕಂಪನಿಗಳಲ್ಲಿ ಸುಮಾರು ವರ್ಷಗಳಿಂದ ಸೇವೆ ಸಲ್ಲಿಸಿದ್ದು, ಕಂಪನಿಗಳು ಬಂದಾಗಿರುವುದರಿಂದ ಉದ್ಯೋಗ ಕಳೆದುಕೊಂಡ ಕೂಲಿ ಕಾರ್ಮಿಕರು ಸಮಸ್ಯೆಗೆ ಒಳಗಾಗಿದ್ದಾರೆ.

## ಇಂಡಿ–ಸಿಂದಗಿ: ವಿದ್ಯುತ್ ವ್ಯತ್ಯಯ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 110/11 ಕೆವಿ ಹಿರೇನೆವನೂರ, 110/11 ಕೆವಿ ರೋಡಗಿ, 110/11 ಕೆವಿ ಹೀರೆಮಸಳಿ, 110/11 ಕೆವಿ ಇಂಚಗೇರಿ, 110/11 ಕೆವಿ ಚಡಚಣ, 110/11ಕೆವಿ ಕೆರೂರ, 110/11ಕೆವಿ ಮೊರಟಗಿ, 110/11 ಕೆವಿ ದೇವಣಗಾಂವ, 110/11 ಕೆವಿ ಮಲಘಾಣ ವಿದ್ಯುತ್ ವಿತರಣ ಕೇಂದ್ರಗಳಲ್ಲಿ 33ಕೆವಿ ಹಾಗೂ 11ಕೆವಿ ಬೇಗಳ ಎರಡನೇ ತ್ರೈಮಾಸಿಕ ಕಾರ್ಯ ಕಾಮಗಾರಿ ಕೈಗೆತ್ತಿಕೊಳ್ಳುವುದರಿಂದ ಈ ವಿದ್ಯುತ್ ವಿತರಣಾ ಕೇಂದ್ರದ ಎಲ್ಲಾ 33ಕೆವಿ, 11ಕೆವಿ ಮಾರ್ಗಗಳಲ್ಲಿ ಸೆಪ್ಟೆಂಬರ್ 26ರಂದು ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 3ರವವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ ಎಂದು ಹೆಸ್ಕಾಂ ಇಂಡಿ ಕಾರ್ಯನಿರ್ವಾಹಕ ಅಭಿಯಂತರರ ಪ್ರಕಟಣೆ ತಿಳಿಸಿದೆ.

## ಕಜಾಪ ತಾಲೂಕಾಧ್ಯಕ್ಷರಾಗಿ ನೂಲಾನವರ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಕನ್ನಡ ಜಾನಪದ ಪರಿಷತ್ತಿನ ಸಿಂದಗಿ ತಾಲೂಕು ಘಟಕದ ನೂತನ ಅಧ್ಯಕ್ಷರನ್ನಾಗಿ ಉಪನ್ಯಾಸಕ ಹಾಗೂ ಪತ್ರಕರ್ತ ಮಹಾಂತೇಶ ನೂಲಾನವರ ಅವರನ್ನು ಆಯ್ಕೆಮಾಡಲಾಗಿದೆ ಎಂದು ರಾಜ್ಯಾಧ್ಯಕ್ಷ ಡಾ.ಎಸ್.ಬಾಲಾಜಿ ಆದೇಶ ಹೊರಡಿಸಿದ್ದಾರೆ. ಜಾನಪದ ಕಲೆಗಳ ಕ್ಷೇತ್ರ ಕಾರ್ಯ, ದಾಖಲೀಕರಣ, ತರಬೇತಿ ಮೂಲಕ ಜಾನಪದ ಕಲೆಗಳನ್ನು ಉಳಿಸುವ ನಿಟ್ಟಿನಲ್ಲಿ ಕ್ರಿಯಾಶೀಲರಾಗಿ ಮತ್ತು ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿಸಬೇಕು ಎಂದು ಆದೇಶದಲ್ಲಿ ತಿಳಸಿದ್ದಾರೆ ಎಂದು ಕಜಾಪ ಜಿಲ್ಲಾಧ್ಯಕ್ಷ ಬಾಳನಗೌಡ ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಸಿದ್ದಾರೆ.



## ಮಾತೆ ಚಾಮುಂಡೇಶ್ವರಿ ಇಂದು ಕಾಂಗ್ರೆಸ್‌ಗೆ ಒಳ್ಳೆ ಪಾಠ ಕಲಿಸಿದ್ದಾಳೆ: ಠಾಕುರ

ಬೀದರ್: ರಾಜ್ಯಪಾಲರ ನಡೆ ಪ್ರಶ್ನಿಸಿ ಮೂಡಾ ಹಗರಣದಲ್ಲಿ ಭಾಗಿಯಾಗಿರುವ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಕರ್ನಾಟಕ ಉಚ್ಚ ನ್ಯಾಯಾಲಯಕ್ಕೆ ಸಲ್ಲಿಕೆಯಾಗಿದ್ದ ಅರ್ಜಿ ಕೋರ್ಟ್ ವಜಾಗೊಳಿಸಿ ರಾಜ್ಯಪಾಲರ ಕ್ರಮ ಸರಿ ಇದೆ ಎಂದು ತೀರ್ಪು ಪ್ರಕಟಿಸುವ ಮೂಲಕ ಮಾತೆ ಚಾಮುಂಡೇಶ್ವರಿ ದೇವಿಯು ಕೈ ಪಾಳಯಕ್ಕೆ ಒಂದು ಕೈ ತೋರಿಸಿಯೇ ಬಿಟ್ಟಿದ್ದಾಳೆ ಎಂದು ಬಿಜೆಪಿ ಕಲಬುರಗಿ ವಿಭಾಗಿಯ ಸಹ ಪ್ರಭಾರಿಗಳಾದ ಈಸ್ವರಸಿಂಗ್ ಠಾಕೂರ್ ಹೇಳಿದ್ದಾರೆ.

## ತುಂಬಿ ಹರಿದ ಹಳ್ಳ ಕೊಳ್ಳ: ದೇವಸ್ಥಾನಕ್ಕೆ ನುಗ್ಗಿದ ಮಳೆ ನೀರು



■ ಉದಯರಶ್ಮಿ ದಿನಪತ್ರಿಕೆ



ತಿಕೋಟಾ: ತಾಲ್ಲೂಕಿನಲ್ಲೆಡೆ ಸೋಮವಾರ ರಾತ್ರಿ ಸುರಿದ ಭಾರಿ ಮಳೆಗೆ ಹಳ್ಳಕೊಳ್ಳ ಬಾಂದಾರಗಳು ತುಂಬಿ ಹರಿಯುತ್ತಿದ್ದು, ರೈತರ ತೋಟಗಳಿಗೆ ನೀರು ನುಗ್ಗಿದ್ದರಿಂದ ದ್ರಾಕ್ಷಿ ಪಡಗಳು ನೀರಲ್ಲೆ ನಿಂತಿವೆ.

ತಾಲ್ಲೂಕಿನ ಕಳ್ಳಕವಟಗಿ ಗ್ರಾಮದ ಸಂಗಮನಾಥ ಹಳ್ಳದ ಬಾಂದಾರ ತುಂಬಿ ಹರಿಯುತ್ತಿದ್ದು, ಅಪಾಯಮಟ್ಟ ಮೀರಿ ಹರಿದು ಸೇತುವೆ ಮೇಲಗಡೆ ಅಪಾರ ಪ್ರಮಾಣದಲ್ಲಿ ನೀರು ಹರಿಯುತ್ತಿರುವದರಿಂದ ವಾಹನ ಸವಾರರಿಗೆ ತೊಂದರೆಯುಂಟಾಗಿ ಸಾಲುಗಟ್ಟಲೆ ವಾಹನಗಳು ನಿಂತಿದ್ದವು. ಸಂಗಮನಾಥ ದೇವಾಲಯದ ಗರ್ಭಗುಡಿಯ ಒಳಗೆ ನೀರು ನುಗ್ಗಿದ್ದರಿಂದ ಪೂಜಾ ಕಾರ್ಯಗಳು ಸ್ಥಗಿತಗೊಂಡಿವೆ.

ಡೋಣಿ ನದಿ ಹರಿವು ಮಳೆಯಿಂದಾಗಿ ಹೆಚ್ಚಾಗಿದ್ದರಿಂದ ರೈತರ ತೋಟಗಳಿಗೆ ನೀರು ಹರಿದು ತೊಗರಿ ಇತರೆ ಬೆಳೆಗಳು ಜಲಾವೃತ್ತವಾಗಿವೆ. ಕೆಲವೆಡೆ ಸೇತುವೆ ಮೇಲಿರುವ ಡಾಂಬರಿ ಕಿತ್ತು ಹೋಗಿದೆ. ಹಳ್ಳಕೊಳ್ಳಗಳು ತುಂಬಿ ಹರಿಯುತ್ತಿರುವದರಿಂದ ಶಾಲಾ ಮಕ್ಕಳಿಗೆ ಶಾಲೆಗಳಿಗೆ ತೆರಳಲು ತೊಂದರೆಯಾಯಿತು.

## ಹೊನವಾಡ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘ ಲಾಭದಲ್ಲಿ

■ ಉದಯರಶ್ಮಿ ದಿನಪತ್ರಿಕೆ



ಹೊನವಾಡ: ತಿಕೋಟಾ ತಾಲ್ಲೂಕಿನ ಹೊನವಾಡ ಗ್ರಾಮದಲ್ಲಿ ವಿವಿದೊದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘ ನಿಯಮಿತ ಸಂಘದ 2023–24 ನೇ ಸಾಲಿನ 104ನೇ ವಾರ್ಷಿಕ ಮಹಾ ಸಭೆ ಸಂಘದ ಕಚೇರಿಯ ಆವರಣದಲ್ಲಿ ನಡೆಯಿತು. ಬ್ಯಾಂಕ್‌ನ ಅಧ್ಯಕ್ಷ ನಿಂಗಪ್ಪ ಗುಗ್ಗರಿ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು. ಶಿವರುದ್ರಯ್ಯ ಮಠಪತಿ ಸಭೆಯ ನಡಾವಳಿ ಓದಿದರು.

ಸಹಕಾರಿ ಬ್ಯಾಂಕುಗಳಿಗೆ ಠೇವಣಿದಾರರು ಹಾಗೂ ಷೇರುದಾರರು ಜೀವಾಳವಾಗಿದ್ದು, ಸಾಲ ಪಡೆದವರು ಸರಿಯಾಗಿ ಮರುಪಾವತಿ ಮಾಡಿದಲ್ಲಿ ಮಾತ್ರ ಸಹಕಾರಿ ಸಂಘ ಸಂಸ್ಥೆಗಳು ಅಭಿವೃದ್ಧಿಯೊಂದಿಗೆ ಮುನ್ನಡೆಯಲು ಸಾಧ್ಯ ಎಂದು ಉದ್ಘಾಟಿಸಿ ಬಾಬುರಾವ್ ಮಹಾರಾಜರು ಮಾತನಾಡಿದರು.

ರಸಗೊಬ್ಬರ ಸೇರಿದಂತೆ ನಾನಾ ಸಾಮಗ್ರಿಗಳನ್ನು ಮಾರಾಟ ಮಾಡುವ ಮೂಲಕ ಸಂಘವನ್ನು ಅಭಿವದ್ಧಿ ಪಥದತ್ತ ಸಾಗಿಸಲು ಸದಸ್ಯರು ಸೂಚಿಸಿದರು.

ಸಾವಯವ ಕೃಷಿಯು ಬೆಳೆ ಉತ್ಪಾದನೆಯ ಪಶುಸಂಗೋಪನೆಯ ನಡುವೆ ಸಾಮರಸ್ಯದ ಸಮತೋಲನವನ್ನು ಸೃಷ್ಟಿಸುತ್ತದೆ ಮತ್ತು ನೈಸರ್ಗಿಕ ಪರಿಸರ ವ್ಯವಸ್ಥೆಗಳು ಮತ್ತು ಚಕ್ರಗಳ ಜೊತೆಗಿನ ಜೋಡಣೆಯನ್ನು ಸುಗಮಗೊಳಿಸುತ್ತದೆ ಎಂದು ತೆಲಸಂಗದ ಕೃಷಿ ಅಧಿಕಾರಿ ಯಂಕಪ್ಪ ಉಪ್ಪಾರ ಹೇಳಿದರು

ವೇದಿಕೆಯ ಮೇಲೆ ಕಾರ್ಯದರ್ಶಿ ದುಂಡಪ್ಪ ಗುಗ್ಗರಿ, ಹಿರಿಯರಾದ ನೀಲಕಂಠ ಕೋಟಿ ಲಾಲಾಸಾಬ್ ತೆಲಸಂಗ ಹೂವಣ್ಣ ಗುಗ್ಗರಿ ದತ್ತಾ ಮೋಹಿತೆ ಧರೆಪ್ಪ ಚಾವರ ಆನಂದ ಕೊರಬು ಸತ್ಯಪ್ಪ ಪೂಜಾರಿ ಮಲ್ಲಪ್ಪ ಯಚ್ಚಿ ಶ್ಯಾಮು ಬಡಳ್ಳಿ ಆಡಳಿತ ಮಂಡಳಿಯ ಸದಸ್ಯರು ಪಿಕೆಪಿಎಸ್ ಸಿಬ್ಬಂದಿಗಳು ಗ್ರಾಮಸ್ಥರು ಮತ್ತಿತರರು ಇದ್ದರು.

## ಸಿದ್ಧಾಂಥ ಶಿಖಾಮಣಿ ಗ್ರಂಥದ ಸಾರ ಅರಿಯಿರಿ

ಬೀದರ್: ಸಿದ್ಧಾಂಥ ಶಿಖಾಮಣಿ ಗ್ರಂಥದ ಸಾರವನ್ನು ಪ್ರತಿಯೊಬ್ಬರೂ ಅರಿಯಬೇಕು ಎಂದು ಶ್ರೀಶೈಲ ಜಗದ್ಗುರು ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯರು ಹೇಳಿದರು.

ನಗರದ ಬೆಲ್ದಾಳೆ ಕನ್ವೆನ್ಷನ್ ಹಾಲನಲ್ಲಿ ಭಾನುವಾರ ನಡೆದ ಶ್ರೀ ಸಿದ್ಧಾಂಥ ಶಿಖಾಮಣಿ ಅಭಿಯಾನ, ಶ್ರಾವಣ ಶಿವ ದರ್ಶನ ಸಂಚಾರ ಸಮಾರೋಪ ಹಾಗೂ ಶ್ರೀ ಜಗದ್ಗುರು ಪಂಚಾಚಾರ್ಯ ರಾಷ್ಟ್ರೀಯ ಪುರಸ್ಕಾರ ಪ್ರದಾನ ಸಮಾರಂಭದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಸಿದ್ಧಾಂಥ ಶಿಖಾಮಣಿ ಗ್ರಂಥ ಎಲ್ಲ ಸಿದ್ಧಾಂತಗಳಿಗೆ ಶಿಖಾಮಣಿ ಆಗಿದೆ. ಭಗವತ್ ಸಾಕ್ಷಾತ್ಕಾರದ ಸೂತ್ರ ಒಳಗೊಂಡಿದೆ. ಇದು, ವೀರಶೈವ ಲಿಂಗಾಯತರಿಗಷ್ಟೇ ಅಲ್ಲ; ಇಡೀ ಮನುಕುಲದ ಧರ್ಮಗ್ರಂಥವಾಗಿದೆ ಎಂದು ತಿಳಿಸಿದರು.

ಸಿದ್ಧಾಂತ ಶಿಖಾಮಣಿ ಬಗ್ಗೆ ಮೂಗಿನ ನೇರಕ್ಕೆ ಮಾತನಾಡುವ ಕೆಲವರಿಗೆ ಅದರ ಗಂಧ, ಗಾಳಿಯೇ ಗೊತ್ತಿಲ್ಲ. ಯಾವುದೇ ಗ್ರಂಥದ ವರ್ಣನೆ ಮಾಡಲು ಆ ಗ್ರಂಥವನ್ನು ಅರ್ಥಂಬರ್ಥ ಓದಿದರೂ ನಡೆಯುತ್ತದೆ. ಆದರೆ, ನಿರಾಕರಿಸಲು ಸಂಪೂರ್ಣ ಓದಬೇಕಾಗುತ್ತದೆ ಎಂದು ಹೇಳಿದರು.

ಗ್ರಂಥದ ಬಗ್ಗೆ ತಿಳಿದುಕೊಳ್ಳದವರಿಗೆ ಅದನ್ನು ನಿರಾಕರಿಸುವ ಯಾವುದೇ ಅಧಿಕಾರ ಇರುವುದಿಲ್ಲ. ಹೀಗಾಗಿ ಸಿದ್ಧಾಂತ ಶಿಖಾಮಣಿ ಬಗ್ಗೆ ಹಗುರವಾಗಿ ಮಾತನಾಡುವವರು ಮೊದಲು ಗ್ರಂಥವನ್ನು ಸರಿಯಾಗಿ ಓದಬೇಕು. ಆಗ ಅವರಿಗೆ ಅದರ ಮಹತ್ವ ಅರಿವಿಗೆ ಬರಲಿದೆ. ಅನಂತರವಷ್ಟೇ ಅವರು ಗ್ರಂಥವನ್ನು ಪುರಸ್ಕರಿಸುವ ಇಲ್ಲವೇ ತಿರಸ್ಕರಿಸುವ ನಿರ್ಣಯ ಕೈಗೊಳ್ಳಬಹುದು ಎಂದು ತಿಳಿಸಿದರು.

# ವಿಕಾಸ್ ಖನ್ನ ಮತ್ತು ಭಾರತೀಯ ಆಹಾರ ಸಂಸ್ಕೃತಿಯ ಹಿರಿಮೆ

■ ಉದಯರಶ್ಮಿ ದಿನಪತ್ರಿಕೆ





ಜಗತ್ತಿನ ಪ್ರಖ್ಯಾತ ಬಾಣಸಿಗರಲ್ಲಿ ಒಬ್ಬರಾದ ಸ್ಟಾರ್ ಶೆಫ್ ವಿಕಾಸ್ ಖನ್ನ ಯಾರಿಗೆ ಗೊತ್ತಿಲ್ಲ. ರುಚಿಕರವಾದ ಖಾದ್ಯಗಳನ್ನು ಮಾಡಿ ಬಡಿಸುವುದರ ಜೊತೆ ಜೊತೆಗೆ ತನ್ನ ಸರಳತೆಗೂ ಹೆಸರಾದ ವ್ಯಕ್ತಿ ವಿಕಾಸ್ ಖನ್ನ. 2020 ರಲ್ಲಿ ಬಿಬಿಸಿ ವರ್ಲ್ಡ್ ಚಾನೆಲ್ ಗೆ ನೀಡಿದ ಸಂದರ್ಶನವೊಂದರಿಂದ ಇದೀಗ ಅವರು ಮತ್ತೊಮ್ಮೆ ಸುದ್ದಿಯಲ್ಲಿದ್ದಾರೆ.

ಭಾರತೀಯ ಪಾಕ ಕಲೆಯ ಸಾಂಸ್ಕೃತಿಕ ಇತಿಹಾಸವನ್ನು ಅರಿಯದ, ಸಹಭೋಜನ, ಪ್ರಸಾದ, ದಾಸೋಹಗಳ ಹೆಸರಿನಲ್ಲಿ ದೀನ ದಲಿತರಿಗೆ ಉಣ ಬಡಿಸುವ ಭಾರತ ದೇಶದ ಶ್ರೀಮಂತ ಸಂಸ್ಕೃತಿಯ ಗರಿಮೆಯನ್ನು ಅರಿಯದ ಬಿಬಿಸಿಯ ಸಂದರ್ಶಕ ವಿಕಾಸ ಖನ್ನ ಅವರಿಗೆ ಭಾರತದಲ್ಲಿ ಬಡತನ ತಾಂಡವವಾಡುತ್ತಿರುವ ಕಾರಣ ನಿಮಗೆ ಹಸಿವು ಎಂಬ ಪದದ ಅರಿವು ಉಂಟಾಯಿತಲ್ಲವೇ? ಎಂದು ಪ್ರಶ್ನೆಯೆಸಗಿದ.

ಅತ್ಯಂತ ಶಾಂತವಾದ ಮನಸ್ಥಿತಿಯೊಂದಿಗೆ ವಿಕಾಸ್ ಖನ್ನ ಉತ್ತರಿಸಿದರು "ನನಗೆ 'ಹಸಿವು' ಎಂಬ ಪದದ ಅರಿವು ಭಾರತ ದೇಶದಲ್ಲಿ ಆಗಿಯೇ ಇಲ್ಲ ಕಾರಣ ನಾನು ಹುಟ್ಟಿ ಬೆಳೆದದ್ದು ಭಾರತ ದೇಶದ ಗೋದಿಯ ಕಣಜ ಪಂಜಾಬಿನ ಅಮೃತಸರದಲ್ಲಿ. ನಮ್ಮಲ್ಲಿ ಬೃಹತ್ ಸಮುದಾಯ ಅಡುಗೆ ಕೋಣೆಗಳಿದ್ದು ಎಲ್ಲರಿಗೂ ಅಡುಗೆ ತಯಾರಾಗುವ ಅಲ್ಲಿ ಯಾರು ಬೇಕಾದರೂ ಹೊಟ್ಟೆ ತುಂಬಾ ಊಟ ಮಾಡಿ ತಮ್ಮ ಹಸಿವನ್ನು ತೀರಿಸಿಕೊಳ್ಳಬಹುದು. ಇಡೀ ಅಮೃತಸರವೆ ಉಣ್ಣಬಹುದಾದಷ್ಟು ಅಡುಗೆಯನ್ನು 'ಲಂಗರ' ಎಂಬ ಸಮುದಾಯ ಅಡುಗೆ ಕೋಣೆಗಳಲ್ಲಿ ತಯಾರಿಸಲಾಗುತ್ತದೆ. ಭಾರತವನ್ನು ಬಿಟ್ಟು ನಾನು ನ್ಯೂಯಾರ್ಕ್ಗೆ ಬಂದಾಗ ನನ್ನ ಕಷ್ಟದ ದಿನಗಳಲ್ಲಿ ನನಗೆ ಹಸಿವು ಎಂದರೇನು? ಎಂಬುದರ ನಿಜವಾದ ಅರಿವಾಯಿತು ಎಂದು ಅತ್ಯಂತ ಹೆಮ್ಮೆಯಿಂದ ಆತ ಭಾರತೀಯ ಸಂಸ್ಕೃತಿ ಮತ್ತು ತನ್ನ ದೇಶದ ಕುರಿತಾದ ಭಕ್ತಿ, ಅಭಿಮಾನವನ್ನು ತೋರಿದ.



ಸಾಮಾಜಿಕ ಜಾಲತಾಣದಲ್ಲಿ ಈ ವಿಷಯದ ಕುರಿತು ಪೋಸ್ಟ್ ಮಾಡಿದ ವಿಕಾಸ್ ಖನ್ನ ಅವರು ಪ್ರತಿಯೊಂದು ದೇಶಕ್ಕೂ ತನ್ನದೇ ಆದ ಏರಿಳಿತಗಳು ಇದ್ದೇ ಇರುತ್ತವೆ, ಅಂತೆಯೇ ಭಾರತವು ಕೂಡ ಬಿ ಬಿ ಸಿ ಯ ಸಂದರ್ಶಕ ಕೇಳಿದ ಅಪ್ರಬುದ್ಧ ಪ್ರಶ್ನೆಯನ್ನು ಖಂಡಿಸಿ ಬರೆದರು.

ಭಾರತವು ವೈವಿಧ್ಯತೆಯಿಂದ ಕೂಡಿದ ಬಹು ಸಂಸ್ಕೃತಿಯ ನಾಡು.ಭಾರತ ದೇಶ ತನ್ನ ಪೂರ್ವಜರು ಹಾಕಿಕೊಟ್ಟ ಸಂಸ್ಕೃತಿ ಸಂಪ್ರದಾಯಗಳನ್ನು ಪಾಲಿಸುತ್ತಾ ಬಂದಿದೆ. ಅಲ್ಲದೆ ಅಭಿವೃದ್ಧಿಯನ್ನು ಹೊಂದುತ್ತಿರುವ ರಾಷ್ಟ್ರಗಳಲ್ಲಿ ಭಾರತವೂ ಒಂದು. ನಮ್ಮ ಆಹಾರ ಪದ್ಧತಿಯು ನಮ್ಮ ಅತಿ ದೊಡ್ಡ ಶಕ್ತಿಯಾಗಿದ್ದು ನಮ್ಮ ಸಾಹಿತ್ಯ,ಸಂಗೀತ ನೃತ್ಯ ಕಲೆ ವಿಜ್ಞಾನ ಸಂಶೋಧನೆ ಮತ್ತು ತಂತ್ರಜ್ಞಾನಗಳು ಇಡೀ ಜಗತ್ತಿಗೆ ಅದ್ವಿತೀಯ ಕಾಣಿಕೆಯನ್ನು ನೀಡಿವೆ. ಭೂಗೋಳದಿಂದ ಖಗೋಳದವರೆಗೆ ಎಲ್ಲ ಶಾಸ್ತ್ರಗಳಲ್ಲಿ, ಖಡ್ಗ, ಕತ್ತಿ ಕಠಾರಿಯಿಂದ ಇದೀಗ ಅತ್ಯಾಧುನಿಕ ಯುದ್ಧ ವಿಮಾನಗಳವರೆಗೆ, ವಾಗ್ಭಟ, ಚರಕ, ಸುಶ್ರುತ ವರಾಹಮಿಹಿರರಿಂದ ಹಿಡಿದು ಇಂದಿನ ಆಧುನಿಕ ವೈದ್ಯಕೀಯ ತಂತ್ರಜ್ಞಾನದವರೆಗೆ **ಭಾರತ ಆವರಿಸಿಕೊಂಡಿದೆ.**

ಇಡೀ ಜಗತ್ತು ಆಗ ತಾನೇ ನಾಗರಿಕತೆಯ ಹೊಸ್ತಿಲಲ್ಲಿ ಇರುವಾಗ ಭಾರತ ದೇಶವು ಆಧುನಿಕ ವಿಜ್ಞಾನ ತಂತ್ರಜ್ಞಾನಗಳ ಜೊತೆ ಜೊತೆಗೆ ಖಗೋಳದ ಅಧ್ಯಯನವನ್ನು ಕೂಡ ಮಾಡಿದ್ದು 5,000 ವರ್ಷಗಳ ಹಿಂದೆಯೇ ಭೂಮಿ ಮತ್ತು ಸೂರ್ಯನ ನಡುವೆ ಇರುವ ದೂರವನ್ನು ಲೆಕ್ಕ ಹಾಕಿದ, ಯಾವುದೇ ಆಧುನಿಕ ವೈದ್ಯಕೀಯ ತಂತ್ರಜ್ಞಾನಗಳು ಇಲ್ಲದ ಕಾಲದಲ್ಲಿ ಶಸ್ತ್ರಚಿಕಿತ್ಸೆಯನ್ನು ಮಾಡಿದ ನಾಡು ನಮ್ಮದು.

ಆರ್ಥಿಕ ಬಡತನ ನಮ್ಮಲ್ಲಿದ್ದರೂ ಸರ್ವರಿಗೂ ಸಮಬಾಳು, ಸರ್ವರಿಗೂ ಸಮಪಾಲು ಎಂಬ ಹಿರಿಮೆಯನ್ನು ಹೊಂದಿದ ಹಸಿದವರಿಗೆ ಉಣ್ಣಲು ಕೊಡುವ ಭಾರತ ದೇಶದಲ್ಲಿ ಕರೋನ ಸಂಕಷ್ಟದ ಸಮಯದಲ್ಲಿ ಉಳ್ಳವರು ಆಹಾರದ ಪೊಟ್ಟಣಗಳನ್ನು ಹಂಚಿದರೆ, ಬಡವರು ಮತ್ತು ಮಧ್ಯಮ ವರ್ಗದವರು ತಮ್ಮ ಜೀವಮಾನದ ದುಡಿಮೆಯಾದ ನಿವೇಶನಗಳನ್ನು, ಆಸ್ತಿಯನ್ನು ಮಾರಿ ದಾಸೋಹ ಸೇವೆಯನ್ನು ಎಸಗಿದರು. ಸಮಾನ ಮನಸ್ಕರು ಸೇರಿ ಅಲ್ಲಲ್ಲಿ ಅಡುಗೆ ಮಾಡಿ ಆಹಾರ ಪೊಟ್ಟಣಗಳನ್ನು ಬಡವರ, ನಿರ್ಗತಿಕರ, ಹಸಿದವರ ಮನೆಗಳಿಗೆ ತಲುಪಿಸಿದರು.

**ಇಂದಿಗೂ ಭಾರತ ದೇಶದ ಮಠ ಮಾನ್ಯಗಳಲ್ಲಿ ನಿರಂತರ ದಾಸೋಹ ವ್ಯವಸ್ಥೆ ಇದೆ.**


ಮತ್ತೆ ಕೆಲ ಲಾಭಬಡುಕರು ವೈದ್ಯಕೀಯ ಚಿಕಿತ್ಸೆಯ ಹೆಸರಿನಲ್ಲಿ ದುಡ್ಡು ಮಾಡಿಕೊಂಡರು ಬಿಡಿ. ನೀರಿರುವಲ್ಲಿ ಕೆಸರು ಕೂಡ ಇರುವಂತೆ ಅಂಥವರು ಕೂಡ ಇರುತ್ತಾರೆ.

ಭಾರತೀಯ ಪದ್ಧತಿಯಲ್ಲಿ ವ್ಯಕ್ತಿಯು ತಾನು ದುಡಿವ ಹಣದಲ್ಲಿ ಒಂದು ಭಾಗ ತನ್ನ ಕುಟುಂಬದ ನಿರ್ವಹಣೆಗೆ, ಮತ್ತೊಂದು ಭಾಗ ಮಕ್ಕಳ ಶಿಕ್ಷಣ ಮತ್ತು ಇತರ ಖರ್ಚು ವೆಚ್ಚಗಳಿಗೆ, ಮೂರನೆಯ ಒಂದು ಭಾಗ ಆರೋಗ್ಯ ಮತ್ತಿತರ ತೊಂದರೆಗಳನ್ನು ನಿಭಾಯಿಸಲು ಭವಿಷ್ಯಕ್ಕಾಗಿ ಎತ್ತಿಡಲು ಮತ್ತು ನಾಲ್ಕನೇ ಒಂದು ಭಾಗ ದೀನ ದಲಿತರ ದರಿದ್ರರ ದಾಸೋಹಕ್ಕಾಗಿ ನೀಡಬೇಕೆಂಬ ಅಲಿಖಿತ ನಿಯಮವಿದ್ದು ಬಹಳಷ್ಟು ಜನ ಇಂದಿಗೂ ಅದನ್ನು ಪಾಲಿಸುತ್ತಾರೆ.

ಎಲ್ಲಾ ದಿನಗಳಲ್ಲೂ ಈ ರೀತಿಯ ಸೇವೆ ಸಾಧ್ಯವಿಲ್ಲದವರು ಹಬ್ಬ ಹರಿದಿನಗಳಲ್ಲಿ ಇತರರಿಗೆ ಉಣ ಬಡಿಸಿ ತಾವು ಉಣ್ಣುತ್ತಾರೆ. ಇಂದಿಗೂ ಮಠಮಾನ್ಯಗಳ ದಾಸೋಹ ಸೇವೆ ನಡೆಯುವುದು ಸಾರ್ವಜನಿಕರು ನೀಡುವ ದವಸ, ಧಾನ್ಯ ಮತ್ತು ದೇಣಿಗೆಗಳಿಂದ. ಸರ್ಕಾರವು ಕೂಡ ಇಂತಹ ದೇಣಿಗೆಗಳಿಗೆ ಆದಾಯ ತೆರಿಗೆಯಲ್ಲಿ ರಿಯಾಯಿತಿ ನೀಡಿ ಜನರನ್ನು ಪ್ರೋತ್ಸಾಹಿಸುತ್ತದೆ. ಹಲವಾರು ಧರ್ಮ ಜಾತಿ ಮತಗಳಿದ್ದರೂ ಕೂಡ ಭಾರತ ದೇಶದಲ್ಲಿ ಕೂಡಿ ಉಣ್ಣುವ ಅನ್ನ ಸಂಸ್ಕೃತಿ ಪದ್ಧತಿ ಇಂದಿಗೂ ಚಾಲ್ತಿಯಲ್ಲಿದೆ.



ಸಮಾಜವಾದವನ್ನು ತಮ್ಮ ಜೀವನದ ಧ್ಯೇಯವನ್ನಾಗಿಸಿಕೊಂಡ ಶ್ರಮ ಸಂಸ್ಕೃತಿಗೆ 'ಕಾಯಕ' ಎಂಬ ಗೌರವನಾಮವನ್ನು ಇಟ್ಟು ದುಡಿದು ಉಣ್ಣಲು ಹೇಳಿದ, ನುಡಿದಂತೆ ನಡೆದ ವಿಶ್ವಗುರು ಬಸವಣ್ಣನವರ ನಾಡಿನಲ್ಲಿ ನಾವು ಜನಿಸಿದ್ದೇವೆ ಎಂಬ ಹೆಮ್ಮೆ, ಅವರು ಕಲಿಸಿದ ಕಾಯಕ, ದಾಸೋಹ ಸಂಸ್ಕೃತಿಯನ್ನು ಮುಂದುವರೆಸಿಕೊಂಡು ಹೋಗುವ ಗುರುತರ ಜವಾಬ್ದಾರಿ ನಮ್ಮ ಮೇಲಿದೆ.



ಲೇಖಕರು

■ ವೀಣಾ ಹೇಮಂತ್ ಗೌಡ ಪಾಟೀಲ್

ಮುಂಡರಗಿ – ಗದಗ

# ಬಡವರು ಅರ್ಥಿಕವಾಗಿ ಸಬಲರಾಗಲಿ : ಶಾಸಕ ಯಶವಂತರಾಯಗೌಡ



■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಬಡ ಮತ್ತು ಮಧ್ಯಮ ವರ್ಗದ ಜನರಲ್ಲಿ ಅರ್ಥಿಕ ಸಬಲತೆ ಉಂಟು ಮಾಡುವ ಉದ್ದೇಶದಿಂದ ಭೀಮಾಶಂಕರ ಸಹಕಾರಿ ಸೌಹಾರ್ದ ಕಾರ್ಯ ಪ್ರವೃತ್ತವಾಗಿದೆ ಎಂದು ಶಾಸಕ ಮತ್ತು ಭೀಮಾಶಂಕರ ಸಹಕಾರಿ ಸೌಹಾರ್ದ ಸಂಘದ ಅಧ್ಯಕ್ಷ ಯಶವಂತರಾಯಗೌಡ ಪಾಟೀಲರು ಹೇಳಿದರು.

ಪಟ್ಟಣದ ಭೀಮಾಶಂಕರ ಬ್ಯಾಂಕಿನ ಸದಸ್ಯೆ ಡಾ॥ ಭಾರತಿ ಗಜಾಕೋಶ ಇವರ ದವಾಖಾನೆ ಆವರಣದಲ್ಲಿ ನಡೆದ ವಾರ್ಷಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಹಕಾರಿಯು ಅರ್ಥಿಕವಾಗಿ ಸದೃಢವಾಗಿದ್ದು, ಪ್ರಗತಿಯತ್ತ ಸಾಗುತ್ತಿದೆ. ಇದಕ್ಕೆ ಆಡಳಿತ ಮಂಡಳಿ ಮತ್ತು ನೌಕರ ವರ್ಗದವರು ಠೇವಣಿದಾರರು ಕಾರಣರಾಗಿದ್ದಾರೆ. ಸಾಲವನ್ನು ಸಕಾಲಕ್ಕೆ ಮರುಪಾವತಿಸಬೇಕೆಂದರು.

ಮುಖ್ಯ ವ್ಯವಸ್ಥಾಪಕ ಶ್ರೀಧರ ದೇಶಪಾಂಡೆ ಮಾತನಾಡಿ, ಬ್ಯಾಂಕು ಪ್ರಸಕ್ತ ವರ್ಷ 64 ಲಕ್ಷ ರೂ ನಿವ್ವಳ ಲಾಭ ಗಳಿಸಿದೆ. ಇಂಡಿ, ವಿಜಯಪುರ, ಧೂಳಖೇಡ ಮತ್ತು ಚಡಚಣಗಳಲ್ಲಿ ಶಾಖೆಗಳನ್ನು ಹೊಂದಿದ್ದು 6 ವರ್ಷ 3 ತಿಂಗಳಲ್ಲಿ ಠೇವಣಿ ದ್ವಿಗುಣ ಗೊಳ್ಳುತ್ತದೆ ಎಂದರು..

ಆಡಳಿತ ಮಂಡಳಿಯ ದನ್ಯಕುಮಾರ ಶಹಾ, ರಮೇಶ ಗುತ್ತೆದಾರ, ಡಾ॥ ರಮೇಶ ಪೂಜಾರಿ, ಮುತ್ತು ದೇಸಾಯಿ, ಅಶೋಕ ಗಜಾಕೋಶ, ಮಹಮ್ಮದ ಬೇಪಾರಿ, ಡಾ॥ ಭಾರತಿ ಗಜಾಕೋಶ , ಸಿಬ್ಬಂದಿ ಪ್ರದೀಪ ಬಾರಿಕಾಯಿ, ರೇವಣಸಿದ್ದ ಬೊಳೆಗಾಂವ, ಶಿವಾನಂದ ಕಟಾಯಿ, ಶೃಷ್ಠಿಕರ್ತ ಕ್ಷತ್ರಿ, ಶಂಕರಗೌಡ ಪಾಟೀಲ, ಲಕ್ಷ್ಮಣ ಶೇಡಬಾಳ,ದೀಪಾ ಬೆಲ್ಲದ, ಮಂಜುನಾಥ ವರ್ಧಮಾನ,ಜಾಕೀರ ಹುಸೇನ ಮತ್ತಿತರಿದ್ದರು. ಇದೇ ವೇಳೆ ಅಶೋಕ ಗಜಾಕೋಶ ದಂಪತಿಗಳನ್ನು ಸನ್ಮಾನಿಸಲಾಯಿತು.

# ಮನಗೂಳಿಯಲ್ಲಿ ಪೌರಕಾರ್ಮಿಕರ ದಿನಾಚರಣೆ

■ ಉದಯರಶ್ಮಿ ದಿನಪತ್ರಿಕೆ



ಬಸವನಬಾಗೇವಾಡಿ: ಪೌರಕಾರ್ಮಿಕರ ಸೇವೆ ಅನನ್ಯವಾಗಿದೆ. ಪೌರಕಾರ್ಮಿಕರು ಕಾರ್ಯನಿರ್ವಹಿಸುವಾಗ ಕಡ್ಡಾಯವಾಗಿ ಆರೋಗ್ಯ ರಕ್ಷಣಾ ಕವಚಗಳನ್ನು ಬಳಕೆ ಮಾಡುವದು ತುಂಬಾ ಅಗತ್ಯವಿದೆ ಎಂದು ಮನಗೂಳಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಶಬ್ಬೀರ ರೇವೂರಕರ ಹೇಳಿದರು.

ತಾಲೂಕಿನ ಮನಗೂಳಿ ಪಟ್ಟಣ ಪಂಚಾಯಿತಿಯ ಸಭಾ ಭವನದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಪೌರಕಾರ್ಮಿಕ ದಿನಾಚರಣೆ ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆರೋಗ್ಯಕರ ಸಮಾಜ ನಿರ್ಮಾಣ ಮಾಡುವಲ್ಲಿ ಪೌರಕಾರ್ಮಿಕರ ಪಾತ್ರ ಅಮೂಲ್ಯವಾಗಿದೆ ಎಂದರು.

ಸಾಹಿತಿ ಶಂಕರ ಬೈಚಬಾಳ ಮಾತನಾಡಿ, ಮನುಷ್ಯನ ಸುಖ ಜೀವನದಲ್ಲಿದೆ. ಜೀವನ ಕೆಲಸದಲ್ಲಿದೆ. ಕೆಲಸ ಯಾರ ಗೌರವವನ್ನು ತಗ್ಗಿಸುವುದಿಲ್ಲ. ಬಸವಾದಿ ಶರಣರು ಸ್ವಚ್ಛತೆಯ ಯಾವುದೇ ಕೆಲಸವನ್ನು ಮಾಡಿದರೂ ಅದಕ್ಕೆ ಕಾಯಕ ಎಂದು ಅದನ್ನು ದೈವತ್ವಕ್ಕೇರಿಸಿದರು. ಅಂತಹ ಕಾಯಕದ ಕಾಲ ಬಳಿ ಸ್ವರ್ಗವಿದೆ ಎಂದರು.

ಇನ್ನೋರ್ವ ಸಾಹಿತಿ ಸಿದ್ದರಾಮ ಬಿರಾದಾರ ಮಾತನಾಡಿ, ಪೌರಕಾರ್ಮಿಕರ ಸೇವೆಯನ್ನು ಸ್ಮರಿಸುವ ಈ ದಿನ ಬಹಳ ಮಹತ್ವಪೂರ್ಣವಾಗಿದೆ ಎಂದರು.

ಪಟ್ಟಣ ಪಂಚಾಯಿತಿ ಸದಸ್ಯ ಭಾಗ್ಯರಾಜ ಸೊನ್ನದ ಅವರು ಪೌರಕಾರ್ಮಿಕರ ಕುರಿತು ಮಾತನಾಡಿದರು.

ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯಿತಿ ಸದಸ್ಯರಾದ ಡಾ.ಆರ್.ಕೆ.ಪತ್ತಾರ, ಶೇಖರಗೌಡ ಬಿರಾದಾರ, ಗೌಡಪ್ಪ ಗುಜಗೊಂಡ, ಗುರುಲಿಂಗಯ್ಯ ಹಿರೇಮಠ, ಅಮೀನಸಾಬ ದಳವಾಯಿ, ತಿಪ್ಪಣ್ಣ ಕ್ಯಾತನ್ನವರ ಇತರರು ಇದ್ದರು.

# ಶ್ರೇಷ್ಠ ವಿಜ್ಞಾನಿಗಳ ಪಟ್ಟಿಗೆ ಕೇಂದ್ರೀಯ ವಿಶ್ವವಿದ್ಯಾಲಯದ ಪ್ರೊ. ಭೋಸಲೆ ಸೇರ್ಪಡೆ

ಕಲಬುರಗಿ: ಸ್ಟ್ಯಾನ್ಫೋರ್ಡ್ ವಿಶ್ವವಿದ್ಯಾನಿಲಯ, ಅಮೆರಿಕಾ ಮತ್ತು ಎಲ್ಸವಿಯರ್, ಆರ್ಗಾನಿಕ್ ಕೆಮಿಸ್ಟ್ರಿ ಕ್ಷೇತ್ರದಲ್ಲಿ ವಿಶ್ವದ ಅಗ್ರ 2ರಷ್ಟು ವಿಜ್ಞಾನಿಗಳ 2024ರ ಪಟ್ಟಿಯಲ್ಲಿ ಕರ್ನಾಟಕದ ಕೇಂದ್ರೀಯ ವಿಶ್ವವಿದ್ಯಾಲಯದ ರಾಸಾಯನಿಕ ವಿಜ್ಞಾನ ವಿಭಾಗದ ಡಾ. ಶೇಷನಾಥ್ ವಿ. ಭೋಸಲೆ ಅವರು ಸ್ಥಾನ ಪಡೆದಿದ್ದಾರೆ. ಸತತ 5ನೇ ಬಾರಿಗೆ ಅವರ ಹೆಸರು ಪ್ರತಿಷ್ಠಿತ ಪಟ್ಟಿಯಲ್ಲಿ ಸೇರ್ಪಡೆಗೊಂಡಿದೆ.

ಸ್ಟ್ಯಾಂಫೋರ್ಡ್ ವಿಶ್ವವಿದ್ಯಾಲಯದ ತಜ್ಞರು ಇತ್ತೀಚೆಗೆ ವಿವಿಧ ಸಂಶೋಧನಾ ಕ್ಷೇತ್ರಗಳಲ್ಲಿ ಕೆಲಸ ಮಾಡುತ್ತಿರುವ ಜಗತ್ತಿನ ಅಗ್ರಗಣ್ಯ 2% ವಿಜ್ಞಾನಿಗಳ ಪಟ್ಟಿಯನ್ನು ಪ್ರಕಟಿಸಿದ್ದಾರೆ. ಪ್ರಪಂಚದ ಟಾಪ್ 2ರಷ್ಟು ವಿಜ್ಞಾನಿಗಳ ಈ ಪಟ್ಟಿಯನ್ನು ಸ್ಟ್ಯಾಫೋರ್ಡ್ ಯೂನಿವರ್ಸಿಟಿ ತಜ್ಞರು ತಮ್ಮ ಮೌಲ್ಯಮಾಪನಗಳಾದ ಪ್ರಕಟಣೆಗಳು, ಉಲ್ಲೇಖಗಳು, ಹೆಚ್–ಸೂಚ್ಯಂಕ ಮತ್ತು ಸಂಶೋಧನೆಯ ವಾಹಕದ ದೀರ್ಘ ಪ್ರಭಾವಕ್ಕಾಗಿ ಸಂಯೋಜಿತ ಸೂಚಕದ ಆಧಾರದ ಮೇಲೆ ತಯಾರಿಸಿದ್ದಾರೆ.

ಯುಜಿಸಿ–ಪ್ರಾಧ್ಯಾಪಕ ಶೇಷನಾಥ್ ವಿ. ಭೋಸಲೆ ಅವರು ಜರ್ಮನಿಯ ಬರ್ಲಿನ ಫ್ರೀ ವಿಶ್ವವಿದ್ಯಾಲಯದಿಂದ ಪಿಎಡಿ ಪಡೆದರು. ನಂತರ ಸ್ವಿಟ್ಜಲೆರ್‌ಂನ ಜಿನೀವಾ ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ನಂತರದ ಅಧ್ಯಯನದ ಪದವಿ ಪಡೆದರು. ಅವರು ಆಸ್ಟ್ರೇಲಿಯಾದ ಮೆಲ್ಬೋನ ಮೊನಾಶ್ ವಿಶ್ವವಿದ್ಯಾಲಯಕ್ಕೆ ಸೇರಿ, ಆಸ್ಟ್ರೇಲಿಯನ್ ಸಂಶೋಧನಾ ಮಂಡಳಿ–ಎಪಿಡಿ ಫೆಲೋ ಆಗಿ ಅಲ್ಲಿ ಅವರು 5 ವರ್ಷಗಳ ಕಾಲ ಕೆಲಸ ಮಾಡಿದರು.



ನಂತರ ಅವರು ಆರು ವರ್ಷಗಳ ಕಾಲ ಆಸ್ಟ್ರೇಲಿಯನ್ ಫ್ಯೂಚರ್ ಫೆಲೋ ಆಗಿ ಆಸ್ಟ್ರೇಲಿಯನ್ ರಿಸರ್ಚ್ ಕೌನ್ಸಿಲ್ ಸದಸ್ಯರಾಗಿ ಆಸ್ಟ್ರೇಲಿಯಾದ ಮೆಲ್ಬೋನ ವಿಶ್ವವಿದ್ಯಾಲಯಕ್ಕೆ ತೆರಳಿದರು. ಅದರ ನಂತರ, ಡಾ. ಶೇಷನಾಥ ಭೋಸಲೆ ಅವರು ಯುಜಿಸಿ–ಎಆಪಿ ಪ್ರೊಫೆಸರ್ ಆಗಿ ಭಾರತದ ಗೋವಾ ವಿಶ್ವವಿದ್ಯಾಲಯಕ್ಕೆ ಸೇರಿದರು. ಅಲ್ಲಿ ಅವರು 5 ವರ್ಷಗಳ ಕಾಲ ಕೆಲಸ ಮಾಡಿದರು. ಮಾರ್ಚ್ 2023 ರಲ್ಲಿ, ಪ್ರೊಫೆಸರ್ ಶೇಷನಾಥ್ ವಿ ಭೋಸಲೆ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ, ಕಲಬುರಗಿಯ ರಾಸಾಯನಿಕ ವಿಜ್ಞಾನಗಳ ವಿಭಾಗ ಸೇರಿದರು ಮತ್ತು ಸಾವಯವ ಸುಪ್ರಮೋಲಿಕ್ಯುಲರ್ ಕೆಮಿಸ್ಟ್ರಿ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿದ್ದಾರೆ. ಅವರು ರಾಯಲ್ ಸೊಸೈಟಿ ಆಫ್ ಕೆಮಿಸ್ಟ್ರಿಯ ಫೆಲೋ, ರಾಯಲ್ ಆಸ್ಟ್ರೇಲಿಯನ್ ಕೆಮಿಕಲ್ ಇನ್ಸಿಟ್ಯೂಟ್ ಸದಸ್ಯ ಮತ್ತು ಮಹಾರಾಷ್ಟ್ರ ಅಕ್ಯಾಡೆಮಿ ಆಫ್ ಸೈನ್ಸ್ ಸದಸ್ಯರಾಗಿದ್ದಾರೆ.

ಯುಜಿಸಿ–ಪ್ರೊಫೆಸರ್ ಡಾ. ಶೇಷನಾಥ್ ವಿಶ್ವನಾಥ್ ಭೋಸಲೆ ಅವರು 300ಕ್ಕೂ ಹೆಚ್ಚು ಪೀರ್–ರಿವ್ಯೂಡ್ ಸಂಶೋಧನಾ ಪ್ರಬಂಧಗಳನ್ನು ಪ್ರತಿಷ್ಠಿತ ಅಂತರರಾಷ್ಟ್ರೀಯ ನಿಯತಕಾಲಿಕಗಳಲ್ಲಿ ಹತ್ತು ಸಾವಿರಕ್ಕೂ ಉಲ್ಲೇಖಗಳು ಮತ್ತು ಹೆಚ್–ಇಂಡೆಕ್ಸ್ 45ನೊಂದಿಗೆ ಪ್ರಕಟಿಸಿದ್ದಾರೆ. ಅವರು 15 ಪುಸ್ತಕ ಅಧ್ಯಾಯಗಳನ್ನು ಪ್ರಕಟಿಸಿದ್ದಾರೆ ಮತ್ತು ಒಂದು ಪುಸ್ತಕವನ್ನು ಸಂಪಾದಿಸಿದ್ದಾರೆ. ಇಲ್ಲಿಯವರೆಗೆ, ಪ್ರೊ. ಭೋಸಲೆ ಅವರು 15 ಪಿಎಡಿ ಮೇಲ್ವಿಚಾರಣೆ ಮಾಡಿದ್ದಾರೆ. ಅವರು ನೇಚರ್ ಸೈಂಟಿಫಿಕ್ ರಿಪೊರ್ಟ್ಸ್, ಕೆಮಿಸ್ಟ್ರಿ ಓಪನ್ (ವೈಲಿ–ವಿಸಿಎಚ್), ಅಗ್ರಿಗೇಟ್ಸ್ (ವೈಲಿ–ವಿಸಿಎಚ್) ಮತ್ತು ಒಆಕಖ ಪ್ರಕಾಶಕರ ಹಲವಾರು ನಿಯತಕಾಲಿಕಗಳಂತಹ ವಿವಿಧ ಅಂತರರಾಷ್ಟ್ರೀಯ ಉನ್ನತ ಶ್ರೇಣಿಯ ನಿಯತಕಾಲಿಕಗಳ ಸಂಪಾದಕೀಯ ಮಂಡಳಿಯ ಸದಸ್ಯರಾಗಿದ್ದಾರೆ.

ಪ್ರೊ. ಭೋಸಲೆ ಅವರು 50 ಕ್ಕೂ ಹೆಚ್ಚು ಅಂತರರಾಷ್ಟ್ರೀಯ ಜರ್ನಗಳ ಖ್ಯಾತಿಗೆ ವಿಮರ್ಶಕರಾಗಿಕೆಲಸಮಾಡುತ್ತಿದ್ದಾರೆ.ಅವರ ಸಂಶೋಧನಾ ಆಸಕ್ತಿಯು ನ್ಯಾನೋ ವಸ್ತು, ಸೂಪರ್ಮಾಲಿಕ್ಯುಲರ್ ರಸಾಯನಶಾಸ್ತ್ರ, ಸಂವೇದಕಗಳು, ಲಿಪಿಡ್ ರಸಾಯನಶಾಸ್ತ್ರ, ಜೈವಿಕ–ಸಾವಯವ ರಸಾಯನಶಾಸ್ತ್ರ, ಕೃತಕ ದ್ಯುತಿಸಂಶ್ಲೇಷಣೆ ಮತ್ತು ಸೂಪರ್ ಕೆಪಾಸಿಟಗಳು, ಸಂಶ್ಲೇಷಿತ ಸಾವಯವ ರಸಾಯನಶಾಸ್ತ್ರದ ತಳಹದಿಯೊಂದಿಗೆ ಸಾವಯವ ಸೌರ ಕೋಶಗಳ ಕ್ಷೇತ್ರದಲ್ಲಿ ಸಂಭವನೀಯ ಅನ್ವಯಗಳೊಂದಿಗೆ ಸಣ್ಣ ಸಾವಯವ ಅಣುಗಳ ಸಂಶ್ಲೇಷಣೆಯಾಗಿದೆ.

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರ ಈ ಮಹೋನ್ನತ ಸಾಧನೆಗಾಗಿ ಅಭಿನಂದಿಸಿದ್ದಾರೆ ಮತ್ತು ಇದು ವಿಶ್ವವಿದ್ಯಾಲಯದಲ್ಲಿ ಸಂಶೋಧನಾ ಸಾಧನೆಗಳಿಗಾಗಿ ಇತರ ಸಂಶೋಧಕರಿಗೆ ಸ್ಫೂರ್ತಿಮತ್ತುಸಂಶೋಧನಾಸಂಸ್ಕೃತಿಯನ್ನು ಬೆಳೆಸುತ್ತದೆ ಎಂದು ಹೇಳಿದ್ದಾರೆ. ಕುಲಸಚಿವ ಪ್ರೊ. ಆರ್.ಆರ್. ಬಿರಾದಾರ್ ಅವರೂ ಕೂಡ ಅವರನ್ನು ಅಭಿನಂದಿಸಿದ್ದಾರೆ.

# 114 ಮಾಡ್ಯುಲರ್ ಆಪರೇಷನ್ ಥಿಯೇಟರ್ ಉಪಕರಣ ಖರೀದಿಯಲ್ಲಿ ಭ್ರಷ್ಟಾಚಾರ

ಕಲಬುರಗಿ: ವೈದ್ಯಕೀಯ ಉಪಕರಣಗಳ ಖರೀದಿಯಲ್ಲಿ 117 ಕೋಟಿ ರೂ. ಅವ್ಯವಹಾರ ಆಗಿದ್ದು, ಇದರ ನೈತಿಕ ಹೊಣೆ ಹೊತ್ತು ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ರಾಜೀನಾಮೆ ಕೊಡಬೇಕು ಎಂದು ಮಾಜಿ ಬಿಜೆಪಿ ಶಾಸಕ ರಾಜಕುಮಾರ ಪಾಟೀಲ ತೇಲ್ಕೂರ ಒತ್ತಾಯಿಸಿದರು.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು ಮುಖ್ಯಮಂತ್ರಿಗಳು ಕೂಡಲೇ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅವರ ರಾಜೀನಾಮೆ ಪಡೆಯಬೇಕು ಎಂದು ತಿಳಿಸಿದರು.

ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ದೊಡ್ಡ ಹಗರಣ ನಡೆದಿದೆ. ರೋಗಿಗಳಿಗೆ ಆರೋಗ್ಯ ಸೇವೆಗೆ ರಾಜ್ಯದ ಹಾವೇರಿ, ಗುಲ್ಬರ್ಗ, ಕೊಪ್ಪಳ, ಯಾದಗಿರಿ, ಬೆಂಗಳೂರು, ಮೈಸೂರು ಮೊದಲಾದ 18 ವೈದ್ಯಕೀಯ ಕಾಲೇಜುಗಳಿಗೆ 114 ಮಾಡ್ಯುಲರ್ ಆಪರೇಷನ್ ಥಿಯೇಟರ್ ಉಪಕರಣಗಳನ್ನು ಖರೀದಿಸಿದ್ದು, 176.70 ಕೋಟಿ ಖರ್ಚು ಮಾಡಿದ್ದಾರೆ ಎಂದರು.



ಟೆಂಡರ್ ಕರೆಯಲು ಕಂಪೆನಿ ಹೆಸರನ್ನು ಬದಲಿಸಿದ್ದು, ಕೋಟ್ಯಂತರ ರೂ. ಭ್ರಷ್ಟಾಚಾರ ನಡೆದಿದೆ. ವೈದ್ಯಕೀಯ ಶಿಕ್ಷಣ ಸಚಿವರು, ಈ ಹಗರಣದಲ್ಲಿ ಭಾಗವಹಿಸಿದ ಸುದ್ದಿ ಇದೆ. ಸರಕಾರವು ಶೇ 60 ಮತ್ತು ಸಂಬಂಧಿತ ಸಂಸ್ಥೆಯು ಆಂತರಿಕ ಸಂಪನ್ಮೂಲದಿಂದ ಶೇ 40% ಹಣ ಭರಿಸುತ್ತಿವೆ ಎಂದು ವಿವರಿಸಿದರು.

ಸರಕಾರಕ್ಕೆ 117 ಕೋಟಿ ನಷ್ಟವಾಗಿದೆ. ಡಾ.ಶರಣಪ್ರಕಾಶ್ ಪಾಟೀಲ್, ಅಧಿಕಾರಿಗಳು, ಉಪಕರಣ ಸರಬರಾಜು ಮಾಡಿದ ಸಂಸ್ಥೆಗೆ ಇದರ ಲಾಭ ಆಗಿರುವ ಸಾಧ್ಯತೆ ಇದೆ. ಹಿಂದೆ 50 ಉಪಕರಣ ಪೂರೈಕೆ ಮಾಡಿದ ಕೇರಳ ವೈದ್ಯಕೀಯ ಸೇವಾ ನಿಗಮದ ಎಂ.ಎಸ್.ಕ್ರಿಯೇಟಿವ್ ಹೆಲ್ತ್ ಟೆಕ್ ಪ್ರೈವೆಟ್ ಲಿಮಿಡೆಟ್ ಸಂಸ್ಥೆ ಇದೇ ಮಾಡ್ಯುಲರ್ ಥಿಯೇಟರ್ ಉಪಕರಣಕ್ಕೆ ಪ್ರತಿಯೊಂದಕ್ಕೆ 49.70 ಲಕ್ಷದ (ಸುಮಾರು 50 ಲಕ್ಷ) ಟೆಂಡರ್‌ಗೆ ಹಾಕಿದ್ದರು. 3 ವರ್ಷ ವಾರಂಟಿ ಎಂದು ತಿಳಿಸಿದೆ. ಬೆಳಗಾವಿ ಸ್ಮಾರ್ಟ್ ಸಿಟಿ ಲಿಮಿಟೆಡ್ ಕಿಮ್ಸ್ ಆಸ್ಪತ್ರೆಯ ಟ್ರಾಮಾ ಸೆಂಟರಗೆ ಮಾಡ್ಯುಲರ್ ಥಿಯೇಟರಗೆ 1.10 ಕೋಟಿಯಂತೆ ಶಿವೋನ್ ಇಂಡಿಯ ಕಂಪೆನಿಗೆ (50 ಲಕ್ಷದ ಎಂ.ಎಸ್.ಕ್ರಿಯೇಟಿವ್ ಬಿಟ್ಟು) ಕಾರ್ಯಾದೇಶ ಮಾಡಿದೆ .

ವೈದ್ಯಕೀಯ ಶಿಕ್ಷಣ ಇಲಾಖೆಯು ಒಂದು ವರ್ಷ ವಾರಂಟಿ ಕೊಡುವ ಎಂ.ಎಸ್.ಲಕ್ಷ್ಮಣ್ಯ ವೆಂಚರ್ಸ್ ಪ್ರೈವೆಟ್ ಲಿಮಿಟೆಗೆ ಪ್ರತಿ ಮಾಡ್ಯುಲರ್ ಆಪರೇಷನ್ ಥಿಯೇಟರ್‌ಗೆ 1 ಕೋಟಿ 29 ಲಕ್ಷದ 69 ಸಾವಿರ ಹಾಗೂ ಜಿಎಸ್‌ಟಿ 23,33,800 ಒಟ್ಟು ಸೇರಿ 1.52 ಕೋಟಿಗೆ ನೀಡಲಾಗಿದೆ. ಕೇರಳದ್ದಾದರೆ ಸುಮಾರು 50 ಲಕ್ಷದಲ್ಲಿ ಖರೀದಿ ಆಗುತ್ತಿತ್ತು .

ಕೇರಳದ ಸಂಸ್ಥೆಗೆ ಹೋಲಿಸಿದರೆ ಸುಮಾರು 3 ಪಟ್ಟು ಹೆಚ್ಚು ದರಕ್ಕೆ ಕೊಟ್ಟಿದ್ದು, ಹಗರಣ ನಡೆಸಲಾಗಿದೆ ಎಂದರು. ಒಂದು ಉಪಕರಣಕ್ಕೆ 1 ಕೋಟಿ ಲಾಭ ಸಿಗುತ್ತಿತ್ತು. 114 ಉಪಕರಣಕ್ಕೆ 117 ಕೋಟಿ ಅವ್ಯವಹಾರ ಆಗಿದೆ ಎಂದು ತಿಳಿಸಿದರು.

ಟೆಂಡರ್ ನಲ್ಲಿ ಹತ್ತಾರು ಕೋಟಿ ಕಿಕ್ ಬ್ಯಾಕ್ ಸಂದಾಯವಾಗಿದೆ.

ಟೆಂಡರ್‌ನಲ್ಲಿ 4 ಕಂಪೆನಿಗಳು ಬಿಡ್ ಸಲ್ಲಿಸಿದ್ದು 3 ಕಂಪೆನಿಗಳನ್ನು ತಿರಸ್ಕರಿಸಿದ್ದಾರೆ. ಯಾವ್ಯಾವ ಕಂಪೆನಿ ಎಷ್ಟು ದರದ ಬಿಡ್ ಸಲ್ಲಿಸಿದ್ದವು ಎಂದು ಕೇಳಿದ್ದು ಮಾಹಿತಿ ಕೊಟ್ಟಿಲ್ಲ ಎಂದು ಆಪಾದಿಸಿದರು. 114 ಉಪಕರಣ ಖರೀದಿಯಲ್ಲಿ 117 ಕೋಟಿ ಮೊತ್ತದ ಭ್ರಷ್ಟಾಚಾರ ಆಗಿದೆ ಎಂದು ಅವರು ತೇಲ್ಕೂರ ಆರೋಪಿಸಿದರು.

# ಪಿಎಸ್‌ಐ ನೇರ ನೇಮಕಾತಿ ಆಯ್ಕೆ ಪಟ್ಟಿ ತಡೆಹಿಡಿಯಲು ಸಚಿವ ಪ್ರಿಯಾಂಕ್ ಖರ್ಗೆ ಪತ್ರ

ಕಲಬುರಗಿ: 545 ಪಿಎಸ್‌ಐ (ಸಿವಿಲ್) ಹುದ್ದೆಗಳ ನೇರ ನೇಮಕಾತಿಗೆ ಸಂಬಂಧಿಸಿದಂತೆ ಆಯ್ಕೆ ಪಟ್ಟಿ ಹಾಗು ನೇಮಕಾತಿ ಆದೇಶಗಳನ್ನು ಸೆಪ್ಟೆಂಬರ್ 27ರವರೆಗೆ ತಡೆಹಿಡಿಯಬೇಕು ಎಂದು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಐಟಿಬಿಟಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಒಳಾಡಳಿತ ಇಲಾಖೆಗೆ ಪತ್ರ ಬರೆದಿದ್ದಾರೆ.

545 ಪಿಎಸ್‌ಐ (ಸಿವಿಲ್) ಹುದ್ದೆಗಳ ನೇರ ನೇಮಕಾತಿ ಅಧಿಸೂಚನೆಯನ್ನು ಕಳೆದ 2021ರ ಜನವರಿ 21ರಂದು ಹೊರಡಿಸಲಾಗಿತ್ತು. ಪರಿಶೀಲನೆಯಲ್ಲಿರುವ 2023ರ ಫೆಬ್ರವರಿ 1ರ ಸರ್ಕಾರದ ಸುತ್ತೋಲೆಗಿಂತ 2 ವರ್ಷಗಳಷ್ಟು ಮೊದಲೇ ಅಧಿಸೂಚನೆಯಾಗಿದೆ. ಪ್ರಸ್ತುತ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯಲ್ಲಿ 2023ರ ಫೆಬ್ರವರಿ 1ರ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆಯ ಸಿಂಧುತ್ವದ ಸಂಬಂಧ ದಾಖಲಾಗಿರುವ ಅರ್ಜಿ ತೀರ್ಪಿನಲ್ಲಿ ಈ ಸುತ್ತೋಲೆಯನ್ನು ರದ್ದುಪಡಿಸಲಾಗಿದೆ ಎಂದು ಅವರು ಆ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಈ ತೀರ್ಪಿನ ವಿರುದ್ಧ ಸರ್ವೋಚ್ಚ ನ್ಯಾಯಾಲಯದಲ್ಲಿ ಸಲ್ಲಿಸಲಾಗಿರುವ ರಿಟ್ ಅರ್ಜಿ ಸಂಬಂಧ ನೀಡುವ ತೀರ್ಪಿಗೊಳಪಟ್ಟು ಪಿಎಸ್‌ಐ ನೇಮಕಾತಿಗೆ ಸಂಬಂಧಿಸಿದಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ 2020ರ ಜೂನ್ 6ರಂದು ಹೊರಡಿಸಿದ ಸುತ್ತೋಲೆಯನ್ವಯ ಕ್ರಮವಹಿಸುವಂತೆ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರಿಗೆ ತಿಳಿಸಲಾಗಿದೆ. ಆದರೆ, ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಿರುವ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ವಿವಿಧ ನೇಮಕಾತಿ ಪ್ರಾಧಿಕಾರಗಳು ಪಾಲಿಸಬೇಕಾದ ವಿಧಿ–ವಿಧಾನಗಳ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹೊರಡಿಸಿರುವ ವಿವಿಧ ಸುತ್ತೋಲೆಗಳಲ್ಲಿ ಗೊಂದಲಗಳಿವೆ ಮತ್ತು ಉಚ್ಚ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇದೆ ಎಂದು ಅವರು ತಿಳಿಸಿದ್ದಾರೆ.



ಈ ಕುರಿತ ಗೊಂದಲಗಳನ್ನು ನಿವಾರಿಸುವ ನಿಟ್ಟಿನಲ್ಲಿ ಸೆಪ್ಟೆಂಬರ್ 27ರಂದು ಸಚಿವ ಸಂಪುಟದ 371(ಜೆ) ಉಪ ಸಮಿತಿ ಸಭೆ ಕರೆಯಲಾಗಿದೆ. ಹೀಗಾಗಿ ಸೆಪ್ಟೆಂಬರ್ 27ರವರೆಗೆ 545 ಪಿಎಸ್‌ಐ (ಸಿವಿಲ್) ಹುದ್ದೆಗಳ ನೇರ ನೇಮಕಾತಿಗೆ ಸಂಬಂಧಿಸಿದಂತೆ ಆಯ್ಕೆ ಪಟ್ಟಿ ಹಾಗು ನೇಮಕಾತಿ ಆದೇಶಗಳನ್ನು ಪ್ರಕಟಿಸದೇ ತಡೆ ಹಿಡಿಯಬೇಕು ಎಂದು ಸಚಿವ ಖರ್ಗೆ ಪತ್ರದಲ್ಲಿ ಕೋರಿದ್ದಾರೆ.

# ದೇಶ ಕಟ್ಟುವ ಕಾರ್ಯಕ್ಕೆ ಎನ್.ಎಸ್.ಎಸ್ ಕೊಡುಗೆ ಅನನ್ಯ



ಕಲಬುರಗಿ: ಇಂದಿನ ವಿದ್ಯಾರ್ಥಿಗಳೇ, ನಾಳಿನ ನಾಗರಿಕರಾಗಿರುವದರಿಂದ, ವಿದ್ಯಾರ್ಥಿ ದೆಸೆಯಿಂದಲೇ ಶಿಸ್ತು, ದೇಶಭಕ್ತಿ, ರಾಷ್ಟ್ರೀಯ ಪ್ರಜ್ಞೆ, ಮಾನವೀಯ ಹಾಗೂ ನೈತಿಕ ಮೌಲ್ಯಗಳು, ಸಮಯಪ್ರಜ್ಞೆ, ಬದ್ಧತೆ, ಜವಾಬ್ದಾರಿ, ಪ್ರಾಮಾಣಿಕತೆ, ನಿಶ್ಚಿತ ಗುರಿ, ನಾಯಕತ್ವದ ಗುಣಗಳು, ನಿರಂತರ ಪ್ರಯತ್ನ ಅಂತಹ ಮುಂತಾದ ಗುಣಗಳನ್ನು ಅಳವಡಿಸಿಕೊಳ್ಳುವಂತೆ ಮಾಡಿ ದೇಶದ ಅಮೂಲ್ಯ ಮಾನವ ಸಂಪತ್ತನ್ನಾಗಿಸುವ ಮೂಲಕ ರಾಷ್ಟ್ರೀಯ ಸೇವಾ ಯೋಜನೆಯು ದೇಶ ಕಟ್ಟುವ ಕಾರ್ಯಕ್ಕೆ ತನ್ನದೇ ಅನನ್ಯವಾದ ಕೊಡುಗೆಯನ್ನು ನೀಡುತ್ತಿದೆ ಎಂದು ಆರ್.ಜೆ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಡಾ.ಪ್ರಲ್ಹಾದ ಬುರ್ಲಿ ಅಭಿಮತ ವ್ಯಕ್ತಪಡಿಸಿದರು.

ಜೇವರ್ಗಿ ಪಟ್ಟಣದ ಬಸವೇಶ್ವರ ವೃತ್ತದ ಬಳಿಯಿರುವ ಸರ್ಕಾರಿ ಪಿಯು ಕಾಲೇಜಿನಲ್ಲಿ ಎನ್.ಎಸ್.ಎಸ್ ಘಟಕದ ವತಿಯಿಂದ ಮಂಗಳವಾರ ಏರ್ಪಡಿಸಲಾಗಿದ್ದ 'ರಾಷ್ಟ್ರೀಯ ಸೇವಾ ಯೋಜನೆಯ 55ನೇ ಸಂಸ್ಥಾಪನಾ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾಲೇಜಿನ ಪ್ರಾಚಾರ್ಯ ರವೀಂದ್ರಕುಮಾರ ಸಿ.ಬಟಗೇರಿ ಮಾತನಾಡಿ, ಭ್ರಾತೃತ್ವ ಭಾವನೆ, ಸಮಾನತೆ, ಜಾತ್ಯಾತೀತತೆ, ವೈಜ್ಞಾನಿಕ, ವೈಚಾರಿಕತೆ ಮನೋಭಾವ ಬೆಳೆಸುತ್ತದೆ. ಕಂದಾಚಾರ, ಮೂಢನಂಬಿಕೆಗಳನ್ನು ನಿರ್ಮೂಲನೆ ಮಾಡುತ್ತದೆ. ಪರಿಸರ ಕಾಪಾಡುವುದು, ಸ್ವಚ್ಚತೆ, ಜನ ಜಾಗೃತಿ ಮೂಡಿಸುವ ಮೂಲಕ ಸ್ವಾವಲಂಬನೆ ಬದುಕನ್ನು ರೂಪಿಸಿಕೊಳ್ಳಲು ರಾಷ್ಟ್ರೀಯ ಸೇವಾ ಯೋಜನೆ ಒಂದು ಉತ್ತಮ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದರು.

ಕಾಲೇಜಿನ ಎನ್.ಎಸ್.ಎಸ್ ಕಾರ್ಯಕ್ರಮ ಅಧಿಕಾರಿ ಎಚ್.ಬಿ.ಪಾಟೀಲ ಮಾತನಾಡಿ, ಮಹಾತ್ಮ ಗಾಂಧಿಜೀಯವರ ಕನಸಿನ ಕೂಸಾದ ಎನ್.ಎಸ್.ಎಸ್ ಅವರ ಜನ್ಮಶತ ಮಾನೋತ್ಸವ ವರ್ಷವಾದ 1969ರಲ್ಲಿ ಅಂದಿನ ಶಿಕ್ಷಣ ಸಚಿವರಾದ ಡಾ.ವಿ.ಕೆ.ಆರ್.ವಿ.ರಾವ್ ಚಾಲನೆ ನೀಡಿದರು. ಇದು 'ನಾನು ಸದಾ ಸಿದ್ಧ' ಎಂಬ ಅರ್ಥವನ್ನು ನೀಡುತ್ತದೆ. 'ನನಗಾಗಿ ಅಲ್ಲ, ನಿಮಗಾಗಿ' ಎಂಬ ಧ್ಯೇಯ ವಾಕ್ಯವನ್ನು ಹೊಂದಿದೆ. ಶಾಂತಿ, ತ್ಯಾಗ, ಪ್ರಗತಿಯ ಸಂಕೇತದ ಚಕ್ರ ಹೊಂದಿರುವ ಚಿಹ್ನೆ ಇದೆ. ವಿದ್ಯಾರ್ಥಿ ದೆಸೆಯಿಂದಲೇ ಉನ್ನತ ವ್ಯಕ್ತಿತ್ವ ನಿರ್ಮಾಣದ ಬಗೆಯನ್ನು ಅರಿತು, ದೇಶಸೇವೆ ಮಾಡಲು ಇದು ಪ್ರೇರಣೆ ನೀಡುತ್ತದೆ ಎಂದರು. ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಮಾಡಿಕೊಳಿ ಎಂದರು.

# ಹಾರಕೂಡ ಶ್ರೀಗಳ 719ನೇ ನಾಣ್ಯ ತುಲಾಭಾರ:60 ಕಲಾವಿದರಿಗೆ ರಾಜ್ಯ ಮಟ್ಟದ ಕುಮಾರಶ್ರೀ ಪ್ರಶಸ್ತಿ ಪ್ರದಾನ




ಕಲಬುರಗಿ: ನಗರದ ಡಾ. ಎಸ್.ಎಂ. ಪಂಡಿತ್ ರಂಗಮಂದಿರದಲ್ಲಿ ಸುವರ್ಣ ಕರ್ನಾಟಕ ಉತ್ಸವ–50 ಹಾಗೂ ಶ್ರೀ ಕುಮಾರೇಶ್ವರ ನಾಟ್ಯ ಸಂಘದ 42ನೇ ವಾರ್ಷಿಕೋತ್ಸವ ನಿಮಿತ್ಯ ಇದೇ ಸೆಪ್ಟೆಂಬರ್ 27ರಂದು ಶುಕ್ರವಾರ ಬೆಳಿಗ್ಗೆ 10–30ಕ್ಕೆ ಹಾರಕೂಡದ ಡಾ.ಚನ್ನವೀರ ಶಿವಾಚಾರ್ಯರ 719ನೇ ನಾಣ್ಯ ತುಲಾಭಾರ, 60 ಕಲಾವಿದರಿಗೆ ರಾಜ್ಯ ಮಟ್ಟದ ಕುಮಾರಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಹಾನಗಲ್ ಶ್ರೀ ಗುರು ಕುಮಾರೇಶ್ವರ ನಾಟ್ಯ ಸಂಘದ ಮಾಲಿಕ ಎಲ್.ಬಿ. ಶೇಖ್ ಮಾಸ್ತರ್ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 1983ರ ಆಗಸ್ಟ್ 4ರಂದು ಮಹಾರಾಷ್ಟ್ರದ ಜತ್ ತಾಲ್ಲೂಕಿನ ಉಮದಿ ಗ್ರಾಮದಲ್ಲಿ ಕಂಪೆನಿ ಪ್ರಾರಂಭಗೊಂಡಿತು. ಸಾಮಾಜಿಕ, ಐತಿಹಾಸಿಕ, ಪೌರಾಣಿಕ ಹಾಗೂ ಧಾರ್ಮಿಕ ನಾಟಕಗಳನ್ನು ಇಡೀ ಕರ್ನಾಟಕ ರಾಜ್ಯಾದ್ಯಂತ ಸಂಚರಿಸಿ ಯಶಸ್ವಿ ಪ್ರಯೋಗಗಳನ್ನು ನೀಡಿದ ಹಿರಿಮೆಗೆ ಕಂಪೆನಿ ಒಳಗಾಗಿದೆ ಎಂದರು.

ಸಮಾರಂಭದ ದಿವ್ಯ ಸಾನಿಧ್ಯವನ್ನು ಡಾ. ಚನ್ನವೀರ ಶಿವಾಚಾರ್ಯರು, ಅಧ್ಯಕ್ಷತೆಯನ್ನು ಶರಣಬಸವೇಶ್ವರ ಸಂಸ್ಥಾನದ ಕಾರ್ಯದರ್ಶಿ ಬಸವರಾಜ್ ದೇಶಮುಖ್ ಅವರು ವಹಿಸುವರು. ಉದ್ಘಾಟನೆಯನ್ನು ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಶ್ರೀ ಬಂಧು ಪ್ರಿಂಟರ್‌ನ ರಮೇಶ್ ಜಿ. ತಿಪ್ಪನೂರ್, ರಂಗಾಯಣದ ನಿರ್ದೇಶಕಿ ಡಾ. ಸುಜಾತಾ ಜಂಗಮಶೆಟ್ಟಿ, ದಾವಣಗೆರೆ ವೃತ್ತಿರಂಗಭೂಮಿ ರಂಗಾಯಣ ನಿರ್ದೇಶಕ ಮಲ್ಲಿಕಾರ್ಜುನ್ ಕಡಕೋಳ್ ಅವರು ಆಗಮಿಸುವರು ಎಂದು ಅವರು ಹೇಳಿದರು.

ಪಂ. ಬಸವರಾಜ್ ಬಂಟನೂರ್ ಗವಾಯಿಗಳು, ಸಿದ್ಧರಾಮ್ ಪೋಲಿಸ್ ಪಾಟೀಲ್ ಕುಕನೂರ್ ಗವಾಯಿಗಳು, ಕುಮಾರ್ ಸಮೀರ್ ಬಿ. ಶೇಖ್ ಹಾಗೂ ಸಂಗಡಿಗರು ರಂಗಗೀತೆಗಳನ್ನು ಪ್ರಸ್ತುತಪಡಿಸುವರು. ಬಸವರಾಜ್ ಹೂಗಾರ್, ಪ್ರಭು ಗುಡ್ಡದ್, ಶಂಕರ್ ಹೂಗಾರ್ ಅವರು ಸಂಗೀತ ಸೇವೆ ಸಲ್ಲಿಸುವರು ಎಂದು ಅವರು ತಿಳಿಸಿದರು.

ಬಳ್ಳಾರಿಯ ಆರ್. ಭೀಮಸೇನ್, ಕಲಬುರ್ಗಿಯ ಸ್ವಾಮಿರಾವ್ ಕುಲಕರ್ಣಿ, ಪ್ರಭುದೇವ್ ಕಪಗಲ್, ರಾಜಣ್ಣ ಜೇವರ್ಗಿ, ಡಾ. ವಿಶ್ವನಾಥ್ ವಂಶಾಕೃತಮಠ್, ಮಹಾಂತೇಶ್ ಗಜೇಂದ್ರಗಡ, ಮಲ್ಲಿಕಾರ್ಜುನ್ ಮಡ್ಡೆ ಮೈಂದರ್ಗಿ, ಸಿದ್ದು ನಾಲತವಾಡ್, ಬಸವರಾಜ್ ಪಂಚಗಲ್, ಮಂಜುನಾಥ್ ಸಂಗನಾಳ್, ಮಂಟೇಶ್ ಬಿ. ದಂಡಿನ್, ಶ್ರೀಮತಿ ಪ್ರೇಮಾ ಬಿ. ಗುಳೇದಗುಡ್ಡ, ಶ್ರೀಮತಿ ಜ್ಯೋತಿಲಕ್ಷ್ಮೀ ಕಲ್ಲೂರ್, ಕುಮಾರ್ ಅರಳಿಹಳ್ಳಿ, ಬಸವರಾಜ್ ಯಾಳವಾರ್, ಅಷ್ಫಾಕ್ ಜಹಾಗೀರದಾರ್, ಶ್ರೀಮತಿ ರಾಜಮ್ಮ ಶ್ರೀಧರ್, ಶ್ರೀಮತಿ ಉಮಾ ರಾಣೆಬೆನ್ನೂರ್, ಮಹಾದೇವಪ್ಪ ಹುಣಶ್ಯಾಳ್, ಪ್ರಭು ಗುಡ್ಡದ ಗೊಳಸಂಗಿ, ಶ್ರೀಮತಿ ಉಮಾ ಬಾರಿಗಿಡದ, ಬಸವರಾಜ್ ಹೂಗಾರ್ ನರಸಲಗಿ, ದಯಾನಂದ್ ಹಾಸು ಹಿರೋಳಿ, ಬಸವರಾಜ್ ಭಂಟನೂರ್, ಸಿದ್ದಣ್ಣ ಹೂಗಾರ್ ದೇಸಾಯಿ ಕಲ್ಲೂರ್, ಸಿದ್ರಾಮಪ್ಪ ಪೋಲಿಸ್ ಪಾಟೀಲ್, ಬಸಣ್ಣ ಪೂಜಾರಿ ಕಲಬುರ್ಗಿ, ಶಂಕರ್ ಹೂಗಾರ್ ದೇಸಾಯಿ ಕಲ್ಲೂರ್, ರಾಯಚೂರಿನ ಶ್ರೀಮತಿ ಶಾಂತಾ ಕುಲಕರ್ಣಿ, ಶ್ರೀಮತಿ ಶಿವಲಿಂಗಮ್ಮ ಬಿ. ಪೂಜಾರಿ, ಸಿರಸಪ್ಪಯ್ಯ ಮಹಾಸ್ವಾಮಿಗಳು ಅಳ್ಳಳ್ಳಿ, ಶಂಕರಜೀ ಹಿಪ್ಪರಗಿ ಕವಿಗಳು, ಸಿದ್ದಲಿಂಗಯ್ಯಸ್ವಾಮಿ ಮಲಕೂಡ್, ಪ್ರಭಾಕರ್ ಜೋಶಿ, ಬಿ.ಹೆಚ್. ನಿರಗುಡಿ, ಗುರಪ್ಪ ಪಾಟೀಲ್, ಶಾಮರಾವ್ ಕೊರವಿ, ಬಸವರಾಜ್ ಪಾಟೀಲ್, ವಿಶ್ವನಾಥ್ ಪಾಟೀಲ್, ರಾಮರಾವ್ ಪಾಟೀಲ್, ಶಿವರಾಜ್ ಪಾಟೀಲ್, ಚಂದ್ರಶೇಖರ್ ಹೊಸಮನಿ, ಗುಂಡಣ್ಣ ಡಿಗ್ಗಿ, ಪ್ರಕಾಶ್ ವಿಭೂತಿ, ಮಲ್ಲಿನಾಥ್ ಆಲೇಗಾಂವ್, ಶ್ರೀನಿವಾಸ್ ಚಿಂಚೋಳಿಕರ್, ಬಾಬು ಗೋಪಾನ್, ಬಾಬುರಾವ್ ಸಾಹುಕಾರ್, ಚಂದು ಬನ್ನಟ್ಟಿ ಅಫಜಲಪುರ, ಕಾಶಿನಾಥ್ ಬಿರಾದಾರ್, ದತ್ತಾತ್ರೇಯ್ ಬುಕ್ಕಾ, ಶ್ರೀಮಂತ್ ಹದಗಲ್ಲಕರ್, ಚಂದ್ರಶೇಖರ್ ಲಕ್ಕಶೆಟ್ಟಿ, ಗೈಬಣ್ಣಾ ವಾಲೀಕಾರ್, ಗೋಪಾಲ್ ಬಾಜೇಪಳ್ಳಿ, ಶೇಖರ್ ದೇವರಗುಡಿ, ಸಂತೋಷ್ ಖನ್ನಾ, ಸಂಗಣ್ಣ ಅಲ್ದಿ, ನಾಗರಾಜ್ ಕಲ್ಲಾ, ಶ್ರೀಮತಿ ಶಾಂತಾ ಭೀಮಸೇನರಾವ್ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಅವರು ವಿವರಿಸಿದರು.

ಕಳೆದ 2003ರ ಆಗಸ್ಟ್ 22ರಲ್ಲಿ ಕಲ್ಯಾಣ ಕರ್ನಾಟಕದ ಕಲಬುರ್ಗಿ ನಗರದಲ್ಲಿ ಕೆ.ಎನ್. ಸಾಳುಂಕೆ ವಿರಚಿತ ಕಿವುಡ ಮಾಡಿದ ಕಿತಾಪತಿ ನಾಟಕ ಪ್ರದರ್ಶನದೊಂದಿಗೆ ದಾಪುಗಾಲು ಹಾಕುತ್ತ ಸತತ 13 ವರ್ಷಗಳ ಕಾಲ ಒಂದೇ ಸ್ಥಳದಲ್ಲಿ ಸುಮಾರು 24 ನಾಟಕಕಾರರ 60 ನಾಟಕಗಳು, 9 ಸಾವಿರಕ್ಕೂ ಹೆಚ್ಚು ಪ್ರದರ್ಶನವನ್ನು ಕಂಪೆನಿ ನೀಡಿದೆ. ಆ ಮೂಲಕ ರಂಗಭೂಮಿಯ ಇತಿಹಾಸದಲ್ಲಿ ಹೊಸ ದಾಖಲೆ ಸೃಷ್ಟಿಸಿದೆ ಎಂದು ಅವರು ಹೇಳಿದರು.

ಸಂಘದ ಯಶಸ್ಸು ಗುರುತಿಸಿ ವಿಧಾನ ಪರಿಷತ್ ಸದಸ್ಯೆ ಹಾಗೂ ಚಿತ್ರನಟಿ ಶ್ರೀಮತಿ ಉಮಾಶ್ರೀ ಅವರ ಗೌರವಾಧ್ಯಕ್ಷತೆಯಲ್ಲಿ ಹಾಗೂ ಶಾಸಕ ಅಲ್ಲಮಪ್ರಭು ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಶ್ರೀ ಗುರು ಕುಮಾರೇಶ್ವರ್ ನಾಟ್ಯ ಸಂಘದ ಅಭಿನಂದನಾ ಸಮಿತಿಯವರು ಡಾ. ಪಂ. ಪುಟ್ಟರಾಜ್ ಕವಿ ಗವಾಯಿಗಳು ಹಾಗೂ ಡಾ. ಚನ್ನವೀರ ಶಿವಾಚಾರ್ಯರ ದಿವ್ಯ ಸಾನಿಧ್ಯದಲ್ಲಿ, ಮಾಜಿ ಮುಖ್ಯಮಂತ್ರಿ ಎನ್. ಧರ್ಮಸಿಂಗ್, ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ್ ಖರ್ಗೆ ಅವರ ಸಮ್ಮುಖದಲ್ಲಿ ಸಂಘದವರಿಗೆ ಹಾಗೂ ಕಲಾವಿದರಿಗೆ ಬೆಳ್ಳಿ ಜೋಡು ಸಮೆಯ ಕಾಣಿಕೆಯೊಂದಿಗೆ ಸನ್ಮಾನಿಸಿ ಗೌರವಿಸಿದ್ದು ಸ್ಮರಣೀಯ ಎಂದು ಅವರು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಶ್ರೀಧರ್ ಹೆಗಡೆ, ಶಂಕರಜೀ ಹಿಪ್ಪರಗಿ, ಸಿದ್ದಲಿಂಗಯ್ಯಸ್ವಾಮಿ, ಬಿ.ಎಚ್. ನಿರಗುಡಿ ಮುಂತಾದವರು ಉಪಸ್ಥಿತರಿದ್ದರು.

# ಸುನೀಲ ಚವ್ಹಾಣ ಗೆ "ಛಾಯಾಶ್ರೀ" ಗೌರವ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಕರ್ನಾಟಕ ಛಾಯಾಚಿತ್ರ ಗ್ರಾಹಕರ ಸಂಘ ಬೆಂಗಳೂರು ಅಡಿಯಲ್ಲಿ ಜರುಗಿದ "ಡಿಜಿ ಇಮೇಜ್ 2024"ರ ವಸ್ತು ಪ್ರದರ್ಶನದಲ್ಲಿ ದೇವರಹಿಪ್ಪರಗಿ ತಾಲ್ಲೂಕಿನ ಉತ್ತಮ ಛಾಯಾಗ್ರಾಹಕರಾಗಿ ಗುರುತಿಸಿಕೊಂಡಿರುವ ಸುನೀಲ ಚವ್ಹಾಣ ಇವರನ್ನು "ಛಾಯಾಶ್ರೀ" ಗೌರವ ನೀಡಿ ಸನ್ಮಾನಿಸಲಾಯಿತು.

# ಬಿರಾಳ ಹಿಸ್ಸಾ ಶಾಲೆಯಲ್ಲಿ ಮೊಟ್ಟೆ ವಿತರಣೆ



■ ಉದಯರಶ್ಮಿ ದಿನಪತ್ರಿಕೆ

ಯಡ್ರಾಮಿ: ಸಮೀಪದ ಬಿರಾಳ ಹಿಸ್ಸಾ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಅಜೀಂ ಪ್ರೇಮ್ ಜಿ ಫೌಂಡೇಶನ್ ಸಹಭಾಗಿತ್ವದಲ್ಲಿ ಶಾಲಾ ಮಕ್ಕಳಿಗೆ 4 ದಿನ ಪೂರಕ ಪೌಷ್ಠಿಕ ಆಹಾರ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಶಾಲಾ ಮುಖ್ಯ ಗುರುಗಳಾದ ಶ್ರೀಶೈಲ ಪೂಜಾರಿ, ಪ್ರಮುಖರಾದ ಗುರಣ್ಣಗೌಡ ಪೊಲೀಸ್ ಪಾಟೀಲ, ಖಆಒಆ ಅಧ್ಯಕರಾದ ಶಿವಶರಣಪ್ಪ ಇಂಗಳಗಿ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನಾ ಯಡ್ರಾಮಿ ತಾಲೂಕಾ ಅಧ್ಯಕ್ಷ ಹುಸೇನ ಭಾಷಾ ನೀರಲಗಿ, ಗುಂಡಪ್ಪ ಹಳ್ಳದಮನಿ, ಮರಲಿಂಗಪ್ಪ ಗುಡ್ಡ್ಯಾಳ, ಶಿಕ್ಷಕಿಯರಾದ ಸುನೀತಾ ಅಂಬೂರೆ, ಶಾಲಾ ಅಡುಗೆ ಸಿಬ್ಬಂದಿ ಹಾಗೂ ಮಳ್ಳಿ ಸಿ ಆರ್ ಪಿ ಪ್ರಶಾಂತ ಕುನ್ನೂರ ಇತರರಿದ್ದರು.

# ಉದ್ಯಾನವನಗಳ ಹಾಗೂ ಕೆರೆಯ ಅಭಿವೃದ್ಧಿಗೆ ಪ್ರಥಮ ಆದ್ಯತೆ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ನಮ್ಮ ಅಧಿಕಾರದ ಅವಧಿಯಲ್ಲಿ ಪಟ್ಟಣದ ಉದ್ಯಾನವನಗಳ ಅಭಿವೃದ್ಧಿಗೆ ಹಾಗೂ ಪಟ್ಟಣದ ಕೆರೆಯ ಅಭಿವೃದ್ಧಿಗೆ ಪ್ರಥಮ ಆದ್ಯತೆ ನೀಡುತ್ತೇನೆ ಎಂದು ಪುರಸಭೆಯ ನೂತನ ಅಧ್ಯಕ್ಷ ಮಹಿಬೂಬ ಗೊಳಸಂಗಿ ಹೇಳಿದರು.

ಪಟ್ಟಣದ ಹುಡ್ಕೊ ಬಡಾವಣೆಯ ಉದ್ಯಾನವನದಲ್ಲಿ ಪುರಸಭೆ, ಅರಣ್ಯ ಇಲಾಖೆ ಹಾಗೂ ಹಸಿರು ತೋರಣ ಗೆಳೆಯರ ಬಳಗ ಹಮ್ಮಿಕೊಂಡಿದ್ದ "ಸ್ವಚ್ಚತಾ ಹಿ ಸೇವಾ" ಅಭಿಯಾನದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಪಟ್ಟಣದ ಜೀವನಾಡಿಯಾಗಿರುವ ಕೆರೆಯ ಸ್ವಚ್ಚತೆ ಹಾಗೂ ಸೌಂದರ್ಯವನ್ನು ಹೆಚ್ಚಿಸಲು ನಾವು ಕ್ರಿಯಾ ಯೋಜನೆ ರೂಪಿಸುತ್ತಿದ್ದೇವೆ. ಇದಕ್ಕೆ ಶಾಸಕರು ಸಹ ಒಪ್ಪಿಗೆ ನೀಡಿದ್ದಾರೆ. ಹಸಿರು ತೋರಣ ಸೇರಿದಂತೆ ವಿವಿಧ ಸಂಘ, ಸಂಸ್ಥೆಗಳ ಸದಸ್ಯರ ಸಲಹೆ ಪಡೆದು ಕೆರೆಯ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ ಎಂದರು. ಪುರಸಭೆ ನೂತನ ಉಪಾಧ್ಯಕ್ಷೆ ಪ್ರೀತಿ ದೇಗಿನಾಳ ಮಾತನಾಡಿ, ಪಟ್ಟಣದ ಸ್ವಚ್ಚತೆ ಬಗ್ಗೆ ಜನರು ಪ್ರಜ್ಞಾವಂತರಾಗಿ ಕೆಲಸ ಮಾಡಬೇಕು. ತ್ಯಾಜ್ಯ ಮುಕ್ತ ಪಟ್ಟಣ ಮಾಡಲು ಎಲ್ಲರೂ ಕೈ ಜೋಡಿಸಬೇಕು ಎಂದರು.

ಪುರಸಭೆಯ ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ ಮಾತನಾಡಿ, ನಾವು ನಡೆಯುವ ಮಾರ್ಗ ಮತ್ತು ಮನಸ್ಸುಗಳು ಒಳ್ಳೆಯದಾಗಿದ್ದರೆ ಎಲ್ಲವೂ ಒಳ್ಳೆಯದಾಗುತ್ತದೆ. ಪಟ್ಟಣದಲ್ಲಿ 64 ಉದ್ಯಾನವನಗಳನ್ನು ಗುರುತಿಸಲಾಗಿದೆ. ಅದಕ್ಕೆ ಗೆಜೆಟ್ ಸಹ ಆಗಿದೆ. ಪಟ್ಟಣವನ್ನು ಚಂಡೀಗಡ ಹಾಗೂ ಬಾಗಲಕೋಟೆ ಮಾದರಿಯಲ್ಲಿ ಯೋಜಿತ ನಗರವನ್ನಾಗಿ ರೂಪಿಸಲು ಎಲ್ಲರೂ ಕೆಲಸ ಮಾಡಬೇಕು. ಸ್ವಭಾವ ಸ್ವಚ್ಚತೆ, ಸಂಸ್ಕಾರ ಸ್ವಚ್ಚತೆ ಉಳ್ಳ ಜನರು ನಮಗೆ ಬೇಕು. ವೇದಿಕೆಯ ಮೇಲೆ ಹೇಳುವುದೊಂದು, ವಾಸ್ತವದಲ್ಲಿ ಬೇರೆ ಮಾಡುವ ಜನರಿಂದ ಏನೂ ಸಾಧ್ಯವಿಲ್ಲ. ದೇಶ ಕಟ್ಟುವ ಕೆಲಸ ನಾವೆಲ್ಲರೂ ಸೇರಿ ಮಾಡೋಣ ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ತೋರಣ ಗೆಳೆಯರ ಬಳಗದ ಅಧ್ಯಕ್ಷ ಡಾ.ವೀರೇಶ ಇಟಗಿ, ಅತಿಥಿಯಾಗಿದ್ದ ಪ್ರಾದೇಶಿಕ ಅರಣ್ಯ ಇಲಾಖೆಯ ವಲಯ ಅರಣ್ಯಾಧಿಕಾರಿ ಬಸನಗೌಡ ಬಿರಾದಾರ, ಪುರಸಭೆಯ ಸದಸ್ಯೆ ಸಂಗಮ್ಮ ದೇವರಳ್ಳಿ ಮಾತನಾಡಿದರು. ಇದೇ ವೇಳೆ ಪುರಸಭೆ ನೂತನ ಅಧ್ಯಕ್ಷ ಉಪಾಧ್ಯರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕಾಮರಾಜ ಬಿರಾದಾರ, ಪುರಸಭೆಯ ಮಾಜಿ ಅಧ್ಯಕ್ಷೆ ಪ್ರತಿಭಾ ಅಂಗಡಗೇರಿ, ಮಾಜಿ ಸದಸ್ಯ ಮುತ್ತು ರಾಯಗೊಂಡ, ಶ್ರೀಶೈಲ ಮರೋಳ, ಹಸಿರು ತೋರಣ ಗೆಳೆಯರ ಬಳಗದ ಮಾಜಿ ಅಧ್ಯಕ್ಷ ಕೆ.ಆರ್.ಕಾಮಟೆ, ನಾಗಭೂಷಣ ನಾವದಗಿ, ಅಶೋಕ ರೇವಡಿ, ಬಿ.ಎಸ್.ಮೇಟಿ, ರವಿ ಗೂಳಿ, ರಾಜಶೇಖರ ಕಲ್ಯಾಣಮಠ, ಕಾರ್ಯದರ್ಶಿ ಬಿ.ಎಚ್.ಬಳಬಟ್ಟಿ, ಉಪಾಧ್ಯಕ್ಷ ಬಸವರಾಜ ಬಿಜ್ಜೂರ, ಸದಸ್ಯರಾದ ಮಲ್ಲಿಕಾರ್ಜುನ ಬಾಗೇವಾಡಿ, ಸುರೇಶ ಕಲಾಲ, ಬಸವರಾಜ ಸಿದರಡ್ಡಿ, ಬಿ.ಎಂ.ಪಲ್ಲೇದ, ವೀರೇಶ ಹಂಪನಗೌಡ್ರ, ವಿಶ್ವನಾಥ ನಾಗಠಾಣ, ವಿಲಾಸರಾವ್ ದೇಶಪಾಂಡೆ, ಶರಣು ಹಿರೇಕುರುಬರ, ಡಾ.ವಿಜಯಕುಮಾರ ಗೂಳಿ, ಡಾ.ಚಂದ್ರಶೇಖರ ಶಿವಯೋಗಿಮಠ, ಅಮರೇಶ ಐಹೊಳೆ, ಸೋಮಶೇಖರ ಚೀರಲದಿನ್ನಿ, ಜಿ.ಎಂ.ಹುಲಗಣ್ಣಿ, ಕಿರಣ ಪಾಟೀಲ, ಶಿವನಗೌಡ ಪಾಟೀಲ, ಸಿದ್ದರಾಜ ಹೊಳಿ, ಎಂ.ಎಸ್. ತೆಗ್ಗಿನಮಠ, ವಿನಯಕುಮಾರ ಹಿರೇಮಠ, ಅರಣ್ಯ ಇಲಾಖೆಯ ಅಧಿಕಾರಿಗಳಾದ ಅಶೋಕ ಚವ್ಹಾಣ, ರಾಜೇಂದ್ರ ಹುನ್ನೂರ, ಅನಿಲ ಚವ್ಹಾಣ, ಪುರಸಭೆಯ ಆರೋಗ್ಯಾಧಿಕಾರಿ ಮಹಾಂತೇಶ ಕಟ್ಟಿಮನಿ ಇದ್ದರು.

ಅಮರೇಶ ಕೆ.ಗೂಳಿ ಸ್ವಾಗತಿಸಿದರು. ಸಂಚಾಲಕ ಮಹಾಬಲೇಶ್ವರ ಗಡೇದ ಪ್ರಾಸ್ತಾವಿಕವಾಗಿ ಮಾತನಾಡಿ, ನಿರೂಪಿಸಿದರು. ಬಳಗದ ಕಾರ್ಯದರ್ಶಿ ಬಿ.ಎಚ್.ಬಳಬಟ್ಟಿ ವಂದಿಸಿದರು.

"ಪುರಸಭೆಯ ನೂತನ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಮೇಲೆ ಪಟ್ಟಣದ ಜನತೆ ಬಹಳಷ್ಟು ನಂಬಿಕೆ, ನಿರೀಕ್ಷೆ ಇಟ್ಟಿದೆ. ಅದನ್ನು ಉಳಿಸಿಕೊಳ್ಳುವ ಜೊತೆಗೆ ಅತ್ಯುತ್ತಮ ಆದರ್ಶ ಕೆಲಸ ಮಾಡುವ ಜವಾಬ್ದಾರಿ ನಿಮ್ಮ ಮೇಲಿದೆ. ಪಟ್ಟಣದ ಉದ್ಯಾನವನಗಳ ಗುರುತಿಸುವಿಕೆ ಮತ್ತು ಅಭಿವೃದ್ಧಿಗೆ ಹಸಿರು ತೋರಣ ಬಳಗ ಸದಾ ತಮ್ಮೊಂದಿಗೆ ಇರುತ್ತದೆ."

■ ಡಾ.ವೀರೇಶ ಇಟಗಿ
ಅಧ್ಯಕ್ಷರು, ಹಸಿರು ತೋರಣ ಗೆಳೆಯರ ಬಳಗ

"ಹೆತ್ತ ತಾಯಿಯ ಬಗ್ಗೆ ಎಲ್ಲರಿಗೂ ಭಾವನಾತ್ಮಕ ಸಂಬಂಧ, ಪ್ರೀತಿ, ಗೌರವ ಇರುತ್ತದೆ. ಇದೇ ಕಾರಣದಿಂದ ಪ್ರಧಾನಿ ನರೇಂದ್ರ ಮೋದಿಯವರು ತಾಯಿಯ ಹೆಸರಿನಲ್ಲಿ ಪ್ರತಿಯೊಬ್ಬರೂ ಗಿಡ ನೆಡುವ ಸಲುವಾಗಿ "ತಾಯಿಯ ಹೆಸರಿನಲ್ಲಿ ಗಿಡ ನೆಡಿ" ಅಭಿಯಾನ ಹಮ್ಮಿಕೊಂಡಿದ್ದಾರೆ. ಇದಕ್ಕೆ ಶಾಲೆ, ಕಾಲೇಜುಗಳ ವಿದ್ಯಾರ್ಥಿಗಳು, ಸಂಘ, ಸಂಸ್ಥೆಗಳು ಸಹಕಾರ ನೀಡಬೇಕು."

■ ಬಸನಗೌಡ ಬಿರಾದಾರ
ವಲಯ ಅರಣ್ಯಾಧಿಕಾರಿ, ಪ್ರಾದೇಶಿಕ ಅರಣ್ಯ ಇಲಾಖೆ

# ಕಲಿಕೋಪಕರಣ ದೇಣಿಗೆ ನೀಡಿದ ಇನ್ನರ್ ವ್ಹೀಲ್ ಕ್ಲಬ್

■ ಉದಯರಶ್ಮಿ ದಿನಪತ್ರಿಕೆ

ತಿಕೋಟಾ: ತಾಲ್ಲೂಕಿನ ಜಾಲಗೇರಿಯ ಹನುಮಾನ ನಗರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ವಿಧ್ಯಾರ್ಥಿಗಳಿಗೆ ಇನ್ನರ್ ವ್ಹೀಲ್ ಕ್ಲಬ್ ಆಫ್ ವಿಜಯಪುರ ವುಯ್ ಕೇರ್ ( ಖಟಿಟಿಜಡಿ ತ್ಥಿಜಜಟ ಠಜಿ ಖಿರಿಚಿಠಿಣಡಿ ತಿಜ ಛಿಚಿಡಿಜ) ಸಂಸ್ಥೆಯಿಂದ ಮಕ್ಕಳಿಗೆ ಕಬ್ಬಿಣದ ಡೆಸ್ಕ, ಕುಡಿಯುವ ನೀರಿನ ಪಿಲ್ಟರ್,ನೋಟಬುಕ್, ಪೆನ್ನು ಹಾಗೂ ಕ್ರೀಡಾ ಸಾಮಗ್ರಿ ಸೇರಿ ರೂ.10 ಸಾವಿರ ಮೌಲ್ಯದ ಕಲಿಕಾ ಸಾಮಗ್ರಿ ದೇಣಿಗೆಯಾಗಿ ನೀಡಿದ್ದಾರೆ.

ಈ ಸಂದರ್ಭದಲ್ಲಿ ಸಂಸ್ಥೆಯ ಡಾ. ರೇಣುಕಾ ಪಾಟೀಲ್, ಡಾ. ಅಶ್ವೀನಿ ಹಿರೇಮಠ, ಡಾ. ಮಹಾನಂದಾ ಚಂದರಗಿ, ಡಾ.ರಾಜಶ್ರೀ ಅಕ್ಕಿ, ಡಾ.ನಳಿನಿ ಬಾಗಲಕೋಟಕರ ಅವರು ಶಾಲಾ ಮಕ್ಕಳಿಗೆ ಉತ್ತಮ ಆರೋಗ್ಯದ ಕುರಿತು ಸಲಹೆ ನೀಡಿದರು. ದುಶ್ಚಟಗಳಿಂದ ದೂರವಿದ್ದು ಆರೋಗ್ಯ ಕಾಪಾಡಿಕೊಳ್ಳಬೇಕು. ಒಳ್ಳೆಯ ಆಹಾರ ಸೇವನೆ ಮಾಡಬೇಕು. ಸ್ವಚ್ಚತೆಯಿಂದ ಇರಬೇಕು. ಮೊಬೈಲಗಳಿಂದ ಮಕ್ಕಳು ದೂರವಿರಬೇಕು ಎಂದು ಸಲಹೆ ನೀಡಿದರು. ಸಿಆರ್ಪಿ ಶರಣಬಸಪ್ಪ ರೆಡ್ಡಿ, ಆರ್.ಡಿ.ಶಿಂಧೆ, ವಿ.ಎನ್.ಕಪಟಕರ, ಶಾಲಾ ಮಕ್ಕಳು ಇದ್ದರು.



## ಎನ್‌ಡಿಎ ಪರೀಕ್ಷೆಯಲ್ಲಿ ವಿಜಯಪುರದ ಎಕ್ಸಲೆಂಟ್ ಕಾಲೇಜ್ ವಿದ್ಯಾರ್ಥಿಗಳ ಸಾಧನೆ

# ದೇಶಪ್ರೇಮದಿಂದ ಮಾತ್ರ ಎನ್ಡಿಎ ಪರೀಕ್ಷೆ ಎದುರಿಸಲು ಸಾಧ್ಯ: ಕೌಲಗಿ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ದೇಶದ ರಕ್ಷಣಾ ವ್ಯವಸ್ಥೆಗೆ ಅವಶ್ಯಕವಾಗಿರುವ ಕೆಲವು ಸೇವೆಗಳಿಗೆ ಬೇಕಾದಂತ ಅಧಿಕಾರಿಗಳನ್ನು ನೇಮಕ ಮಾಡಿಕೊಳ್ಳುವ ಜವಾಬ್ದಾರಿಯನ್ನು ಹೊತ್ತಿರುವ ಕೇಂದ್ರ ಲೋಕ ಸೇವಾ ಆಯೋಗವು ಪ್ರತಿ ವರ್ಷವು ಎನ್‌ಡಿಎ ಪರೀಕ್ಷೆಗಳನ್ನು ನಡೆಸುತ್ತದೆ. ವಿಜ್ಞಾನ ವಿಭಾಗದಲ್ಲಿ ಅಧ್ಯಯನ ಮಾಡುವ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯುವುದಕ್ಕೆ ಅವಕಾಶವಿರುತ್ತಲಿದ್ದು 2024ನೇ ಸಾಲಿನಲ್ಲಿ ನಡೆಸಿದ ಪರೀಕ್ಷೆಯಲ್ಲಿ ವಿಜಯಪುರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ಎಕ್ಸಲೆಂಟ್ ವಿಜ್ಞಾನ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳಾದ ಸಮಥ–ರ್ ಎಸ್. ಕಲಾಲ್, ಶ್ರೀಧತ್ತಾ ದೀಕ್ಷಿತ, ಪ್ರಮೋದ ಚಾಂದಕವಟೆ, ಆದರ್ಶ ವಜ್ರವಾಡ, ಪ್ರೀತಿ ಗಿರೀಶ ಮಂಟೂರು ಸೇರಿದಂತೆ ಐದು ಜನ ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಕಲಿಯುತ್ತಿರುವ ಕಾಲೇಜಿಗೂ ಹಾಗೂ ವಿಜಯಪುರ ಜಿಲ್ಲೆಗೂ ಕೀರ್ತಿ ತಂದಿದ್ದಾರೆ.

ಎಕ್ಸಲೆಂಟ್ ಸಮೂಹ ಶಿಕ್ಷಣ ಸಂಸ್ಥೆಗಳ ಸ್ಥಾಪಕ ಅಧ್ಯಕ್ಷ ಬಸವರಾಜ್ ಕೌಲಗಿ ಹರ್ಷ ವ್ಯಕ್ತಪಡಿಸುತ್ತ, ನಮ್ಮ ಕಾಲೇಜಿನ ವಿದ್ಯಾರ್ಥಿಗಳು ಕಠಿಣವಾಗರುವ ಪರೀಕ್ಷೆಯಲ್ಲಿ ತೇರ್ಗಡೆಯಾಗುವ ಮೂಲಕ ತಮ್ಮಲ್ಲಿನ ದೇಶಭಕ್ತಿಯನ್ನು ಪರೀಕ್ಷೆ ಎದುರಿಸುವ ಮೂಲಕ ತೋರ್ಪಡಿಸಿದ್ದಾರೆ. ಏಕೆಂದರೆ ಎನ್‌ಡಿಎ ಪರೀಕ್ಷೆಗಳು ಎಲ್ಲ ಪರೀಕ್ಷೆಗಳಂತೆ ಇರುವುದಿಲ್ಲ. ಹಾಗೂ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳು ಸಹ ಎಲ್ಲರಂತೆ ಇರುವುದಿಲ್ಲ. ಯಾರಿಗೆ ದೇಶದ ರಕ್ಷಣಾ ವ್ಯವಸ್ಥೆಯಲ್ಲಿ ನನ್ನದೂ ಒಂದು ಪಾಲಿರಲಿ ಹಾಗೂ ಉಸಿರು ಹೆಸರು ಕೊಟ್ಟ ದೇಶಕ್ಕಾಗಿ ನಮ್ಮ ಸೇವೆ ಮುಡಿಪಿರಲಿ ಎನ್ನುವ ಆಸೆ ಇರುತ್ತದೆಯೋ ಅಂಥವರು ಮಾತ್ರ ಈ ಪರೀಕ್ಷೆಯನ್ನು ಎದುರಿಸುವುದಕ್ಕೆ ಮುಂದಾಗುತ್ತಾರೆ. ಮುಂದಿನ ದಿನಗಳಲ್ಲಿ ಇವರ ಮಾರ್ಗದರ್ಶನ ಪಡೆದುಕೊಂಡ ಕಿರಿಯ ಸಹಪಾಟಿಗಳು ಸಹ ಎನ್‌ಡಿಎ ಪರೀಕ್ಷೆಯನ್ನು ಬರೆದು ದೇಶ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು ಎಂದು ಕಿವಿ ಮಾತು ಹೇಳಿದರು.

ಇವರ ಸಾಧನೆಗೆ ಆಡಳಿತ ಮಂಡಳಿಯ ಸರ್ವ ಸದಸ್ಯರು, ಕಾಲೇಜಿನ ಪ್ರಾಚಾರ್ಯ ಶ್ರೀಕಾಂತ ಕೆ.ಎಸ್ ಸೇರಿದಂತೆ ಬೋಧಕ, ಬೋಧಕೇತರ ಸಿಬ್ಬಂದಿಗಳು ಶುಭ ಹಾರೈಸಿದರು.

ಸಮರ್ಥ ಎಸ್. ಕಲಾಲ್ ಶ್ರೀಧತ್ತಾ ದೀಕ್ಷಿತ ಪ್ರಮೋದ ಚಾಂದಕವಟೆ, ಆದರ್ಶ ವಜ್ರವಾಡ ಪ್ರೀತಿ ಗಿರೀಶ ಮಂಟೂರು

## ಅತ್ಯುತ್ತಮ ಶಿಕ್ಷಕ ಪ್ರಶಸ್ತಿಗೆ ಮಾನೆ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಸಮೀಪದ ರೇವತಗಾಂವ ಗ್ರಾಮದ ಮಲ್ಲಿಕಾರ್ಜುನ ಕಲ್ಲಪ್ಪ ಮಾನೆ ಅವರು ಪ್ರಸಕ್ತ ಸಾಲಿನ ಕರ್ನಾಟಕ ರಾಜ್ಯ ಖಾಸಗಿ ಶಾಲಾ ಶಿಕ್ಷಕರ ಸಂಘ(ರಿ)ದ ಮತಿಯಿಂದ ನೀಡಲಾಗುವ ರಾಜ್ಯಮಟ್ಟದ ಅತ್ಯುತ್ತಮ ಖಾಸಗಿ ಶಾಲಾ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಸದ್ಯ ಚಡಚಣ ಮಟ್ಟಣದ ಎಂ.ಇ.ಎಸ್ ಶಿಕ್ಷಣ ಸಂಸ್ಥೆಯಲ್ಲಿ ದೈಹಿಕ ಶಿಕ್ಷಣ ಶಿಕ್ಷಕರಾಗಿ ಕಾರ್ಯ ನಿರ್ವಹಿಸುತ್ತಿದ್ದು, ಇವರಿಗೆ ಶನಿವಾರದಂದು ಬೆಂಗಳೂರಿನ ಜ್ಞಾನ ಭಾರತಿ ಆವರಣದ ಪ್ರೊ.ಕೆ ವೆಂಕಟಗಿರಿ ಗೌಡ ಸಭಾಂಗಣದಲ್ಲಿ ನಡೆಯುವ ಸಮಾರಂಭದಲ್ಲಿ ಈ ಪ್ರಶಸ್ತಿ ನೀಡಿ ಗೌರವಿಸಲಾಗುವುದೆಂದು ರಾಜ್ಯ ಖಾಸಗಿ ಶಾಲಾ ಶಿಕ್ಷಕರ ಸಂಘ(ರಿ)ದ ರಾಜ್ಯಾಧ್ಯಕ್ಷ ಸುರೇಶ ಗೊಲ್ಲರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಔಷಧಿ ತಜ್ಞ ಎನ್ನುವುದು ಆರೋಗ್ಯ ರಕ್ಷಣೆ ವೃತ್ತಿಪರ ಪರವಾನಿಗೆ: ಪರೀಟ್

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ:ಪ್ರಪಂಚದಪ್ರತಿಯೊಂದುಮೂಲೆಯಲ್ಲಿಯೂ ಆರೋಗ್ಯವನ್ನು ಸುಧಾರಿಸುವಲ್ಲಿ ಔಷಧಿಕಾರರ ಪಾತ್ರವನ್ನು ಉತ್ತೇಜಿಸುವ ಮತ್ತು ಪ್ರತಿಪಾದಿಸುವ ಚಟುವಟಿಕೆಗಳನ್ನು ಪ್ರೋತ್ಸಾಹಿಸುವುದು ಈ ದಿನದ ಉದ್ದೇಶವಾಗಿದೆ ಎಂದು ತಾಲೂಕು ಸಾರ್ವಜನಿಕ ಆಸ್ಪತ್ರೆಯ ಔಷದಾಲಯ ತಜ್ಞಾಧಿಕಾರಿ ಶ್ರೀಶೈಲ ಪರೀಟ್ ಹೇಳಿದರು.

ಪಟ್ಟಣದ ಭುವನೇಶ್ವರಿ ವಿದ್ಯಾವರ್ಧಕ ಸಂಘದ ಶ್ರೀ ಸಂಗಮೇಶ್ವರ ಪಾರ್ಮಸಿ ಕಾಲೇಜಿನಲ್ಲಿ ಹಮ್ಮಿಕೊಂಡ ವಿಶ್ವ ಔಷಧಿಕಾರರ ದಿನಾಚರಣೆಯ ಕಾರ್ಯಕ್ರಮವನ್ನು ತಾಲೂಕು ಸಾರ್ವಜನಿಕ ಆಸ್ಪತ್ರೆಯ ಔಷದಾಲಯ ತಜ್ಞಾಧಿಕಾರಿ ಶ್ರೀಶೈಲ ಪರೀಟ್ ಉದ್ಘಾಟಿಸಿ ಮಾತನಾಡಿದ ಅವರು, ಔಷಧಿ ತಜ್ಞ ಎನ್ನುವುದು ಆರೋಗ್ಯ ರಕ್ಷಣೆ ವೃತ್ತಿಪರ ಪರವಾನಿಗೆಯಾಗಿದ್ದು, ಔಷಧಿಗಳನ್ನು ವಿತರಣೆ ಮಾಡುವುದು, ಲಸಿಕೆಗಳನ್ನು ನೀಡುವುದು, ಆಹಾರ ಪೂರಕಗಳ ಸರಿಯಾದ ಬಳಕೆಯ ರೋಗಿಗಳಿಗೆ ಸಲಹೆ ನೀಡುವುದು ಸೇರಿದಂತೆ ಕರ್ತವ್ಯಗಳೊಂದಿಗೆ ಔಷಧಾಲಯದಲ್ಲಿ ತೊಡಗಿಸಿಕೊಳ್ಳುತ್ತಾರೆ ಎಂದು ವಿದ್ಯಾರ್ಥಿಗಳಿಗೆ ತಿಳುವಳಿಕೆ ನೀಡಿದರು.

ಈ ವೇಳೆ ನಿವೃತ್ತ ಪೊಲೀಸ್ ಅಧಿಕಾರಿ ಎಂ. ಎಂ.ಹಂಗರಗಿ, ಹಾಗೂ ಪತ್ರಕರ್ತ ಇಸ್ಮಾಯಿಲ್ ಶೇಖ್ ಮಾತನಾಡಿದರು.

ಸಂಸ್ಥೆಯ ಅಧ್ಯಕ್ಷ ಚಂದ್ರಶೇಖರ ನಾಗರಬೆಟ್ಟ ಅಧ್ಯಕ್ಷೀಯ ನುಡಿಗಳನ್ನಾಡಿದರು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ ತಾಲೂಕಾಧ್ಯಕ್ಷ ಶಿವಾನಂದ ಬಡಾನೂರ, ಬಳಗಾನೂರ ಪ್ರಾಥಮಿಕ ಆರೋಗ್ಯ ಕೇಂದ್ರದ ಔಷಧಾಲಯ ಅಧಿಕಾರಿ ಸುರೇಶ ಬಬಲೇಶ್ವರ, ಉದ್ಯಮಿ ಮಲ್ಲನಗೌಡ ಪಾಟೀಲ ಇಬ್ರಾಹಿಂಪೂರ, ಪತ್ರಕರ್ತರಾದ ಆನಂದ ಶಾಬಾದಿ, ಪಂಡಿತ ಯಂಪೂರೆ, ಪ್ರಾಚಾರ್ಯ ಸಂದೀಪ ಸೇರಿದಂತೆ ಕಾಲೇಜಿನ ಬೋಧಕ ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

**ನೂಲಾನವರ ಗೆ ಸನ್ಮಾನ**

ಇದೇ ಸಂದರ್ಭದಲ್ಲಿ ಕನ್ನಡ ಜಾನಪದ ಪರಿಷತ್ತಿನ ನೂತನ ತಾಲೂಕಾಧ್ಯಕ್ಷರಾಗಿ ಆಯ್ಕೆಯಾದ ಪಟ್ಟಣದ ಉಪನ್ಯಾಸಕ, ಪತ್ರಕರ್ತ ಮಹಾಂತೇಶ ನೂಲಾನವರ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು.

## ದೇವರಹಿಪ್ಪರಗಿಯಲ್ಲಿ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆ

# ಗೃಹಲಕ್ಷ್ಮಿ ಯೋಜನೆ ಹಣ ಹಲವೆಡೆ ಜಮೆಯಾಗುತ್ತಿಲ್ಲ: ಕಣಕಾಲ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಥಮ ಸಭೆ ತಾಲ್ಲೂಕು ಪಂಚಾಯಿತಿ ಇಓ ಭಾರತಿ ಚೆಲುವಯ್ಯ ಅಧ್ಯಕ್ಷತೆಯಲ್ಲಿ ಪಟ್ಟಣದ ಪ್ರವಾಸಿಮಂದಿರದಲ್ಲಿ ಮಂಗಳವಾರ ಜರುಗಿತು.

ಸಭೆಯಲ್ಲಿ ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ, ಅನ್ನಭಾಗ್ಯ, ಯುವನಿಧಿ ಯೋಜನೆಗಳ ಕುರಿತು ಚರ್ಚೆ ಆರಂಭಗೊಂಡಿತು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆ ಅಧ್ಯಕ್ಷ ಸಾಹೇಬಗೌಡ ಬಿರಾದಾರ ಹಾಗೂ ಉಪಾಧ್ಯಕ್ಷ ರೆಹಮಾನ ಕಣಕಾಲ ಮಾತನಾಡಿ, ಹಲವಾರು ಕಡೆ ಗೃಹಲಕ್ಷ್ಮಿ ಯೋಜನೆಯ ಹಣ ಸೂಕ್ತ ರೀತಿಯಲ್ಲಿ ಜಮೆಯಾಗುತ್ತಿಲ್ಲ. ಶಕ್ತಿ ಯೋಜನೆ ಅಡಿಯಲ್ಲಿ ಹೆಚ್ಚುವರಿ ಬಸ್ಸುಗಳನ್ನು ಸಿಂದಗಿ ದೇವರಹಿಪ್ಪರಗಿ ವಿಜಯಪುರ ಮಾರ್ಗಗಳ ಮಧ್ಯ ಓಡಿಸಬೇಕು. ಗ್ರಾಮೀಣ ಶಾಲಾ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಬೇಕು, ಅನ್ನಭಾಗ್ಯ ಯೋಜನೆಯಡಿ ಪಡಿತರ ವಿತರಣೆ ಮಾಡುವವರು ಹಣ ಪಡೆದು ಪಾವತಿ ಮಾಡುತ್ತಿದ್ದಾರೆ ಇದನ್ನು ಕೂಡಲೇ ನಿಲ್ಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು.

ಪಡಿತರ ಚೀಟಿ ಬಯೋಮೆಟ್ರಿಕ್ ಮಾಡಿಕೊಂಡು ನಂತರ ಪಡಿತರ ವಿತರಣೆ ಮಾಡುತ್ತಿದ್ದಾರೆ. ಈ ರೀತಿಯಾಗದಂತೆ ನೋಡಿಕೊಳ್ಳಬೇಕು. ಯುವ ನಿಧಿ ಯೋಜನೆಗೆ ಸಂಬಂಧಿಸಿದಂತೆ ಅರ್ಹ ನಿರುದ್ಯೋಗಿ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು ಎಂದು ತಿಳಿಸಿದರು.

ನರೇಗಾ ಯೋಜನೆ ಸಹಾಯಕ ನಿರ್ದೇಶಕ ಶಾಂತಗೌಡ ನ್ಯಾಮಣ್ಣವರ, ತಾಲ್ಲೂಕು ಯೋಜನಾಧಿಕಾರಿ ಶ್ರೀನಿವಾಸ್ ಪವಾರ, ಹೆಸ್ಕಾಂ ಶಾಖಾಧಿಕಾರಿ ಯು.ಎಲ್.ಪಟ್ಟಣ, ಆಹಾರ ನಿರೀಕ್ಷಕ ದಳವಾಯಿ, ಗ್ಯಾರಂಟಿ ಯೋಜನೆ ಉಪಾಧ್ಯಕ್ಷ ಪರಶುರಾಮ ಉತ್ನಾಳ, ಸದಸ್ಯರಾದ ಬೀರು ಹಳ್ಳಿ, ಪ್ರಕಾಶ ಮಣೂರ, ಮಹಮ್ಮದಶಫೀಕ ಸಿಪಾಯಿ, ಶೋಭಾ ಭಾವಿಕಟ್ಟಿ, ಶಾಕೀರಾ ಹೆಬ್ಬಾಳ, ರವಿಕಾಂತ ನಾಯ್ಕೋಡಿ, ಸದಾಶಿವ ಕಡ್ಲೆವಾಡ, ಭೈರೆಡ್ಡಿ ಹದ್ನೂರ, ಕುಮಾರ ರಾಠೋಡ, ಮಾಂತೇಶ ಚಲವಾದಿ ಮಡಿವಾಳಪ್ಪ ಹಡಪದ, ಜಿ.ಎಸ್.ರೋಡಗಿ, ಎಸ್. ಎಸ್.ಆಲಮೇಲ, ಎ.ಪಿ.ಕಂಬಾರ, ಜಿ.ವಿ.ಸಂಪನ್ನವರ, ಎಸ್.ವಿ.ಹತ್ತರಗಿ ಸೇರಿದಂತೆ ವಿವಿಧ ಇಲಾಖೆಯ ಮುಖ್ಯಸ್ಥರು, ಸಿಬ್ಬಂದಿ ಇದ್ದರು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR